ಸಂಪುಟ : 9 ಸಂಚಿಕೆ 127 ಪುಟ : 4 ಬೆಲೆ: 3.00 ಶನಿವಾರ ಜೂನ್ 22 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 127 Pages : 4 Price : 3.00 Saturday June 22 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜೂನ್ 22ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 33ರಲ್ಲಿ ಝಾಕೀರ್ ಹುಸೇನ್ ಕಾಲೋನಿ, ಮುಳಗುಂದ ರಸ್ತೆ, ಗಡ್ಡಿಯವರ ಲೈನ್, ಗಾಯಕವಾಡ ಅವರ ಲೈನ್, ಜಯಶ್ರೀ ಪವಾರ ಅವರ ಲೈನ್, ಬೆಲ್ಲದ ಬಾಕಳೆ ಲೈನ್, ಪಂಚಮುಖಿ ದೇವಸ್ಥಾನ ಲೈನ್, ಕಲಾಲ ಅವರ ಲೈನ, ಮುಂಡೆವಾಡೆ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 12,13ರಲ್ಲಿ ಆನಂದ ಕಾರ್ಕಳ ಲೈನ್, ಗಣಪತಿ ಗುಡಿ ಹಿಂದಿನ ಲೈನ್, ಮಾಲಿ ಪಾಟೀಲರ ಲೈನ್, ಮುಧೋಳ ಅವರ ಲೈನ್, ಅಗಸರ ಲೈನ್, ತೊಫಿಯಾರ ಲೈನ್, ಜಾಧವ್ ಲೈನ್, ಅಂಗಡಿಯವರ ಲೈನ್, ಶಿವನಗುತ್ತಿ ಲೈನ್, ಜೆ.ಟಿ.ಕಾಲೇಜ್ ಲೈನ್, ಡಂಬಳ ಲೈನ್, ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 35ರಲ್ಲಿ ಆದರ್ಶನಗರ 1ನೇ ಕ್ರಾಸ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 21, 22 ರಲ್ಲಿ ವಿಜಯನಗರ ಶಾಲೆಯ ಭಾಗಗಳು, ಟವರ್‌ಕಂಬದ ಲೈನ್, ಕರುಗಲ್ ಲೇಔಟ್, ಶಿಗ್ಗಾಂವ ಲೇಔಟ್, ವಾಲ್ಮಿಕಿ ಭವನ ಮಾರುತಿ ಗುಡಿ ಲೈನ್, ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡಗಳ ಕಾನೂನು ಪದವೀಧರರಿಗೆ ವೃತ್ತಿ ತರಬೇತಿ ಅವಧಿಯಲ್ಲಿ ಶಿಷ್ಯವೇತನ ಪಾವತಿಸುವ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರರನ್ನು ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ 2 ವರ್ಷದ ಒಳಗೆ ಕಾನೂನು ಪದವಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ಅಭ್ಯರ್ಥಿಯ ವಾರ್ಷಿಕ ಆದಾಯಮಿತಿ ರೂ. 2.00 ಲಕ್ಷಕ್ಕೆ ಮೀರಿರಬಾರದು. ಅಭ್ಯರ್ಥಿಯು ಬಾರ್ ಕೌನ್ಸಿಲ್‌ದಲ್ಲಿ ಹೆಸರು ನೊಂದಾಯಿಸಿರಬೇಕು.

ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಜುಲೈ 31 ರೊಳಗೆ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯನ್ನು ಅಂತಿಮ ವರ್ಷದ ಕಾನೂನು ಪದವಿಯ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಬಾರ್ ಕೌನ್ಸಿಲ್‌ದಲ್ಲಿ ಹೆಸರು ನೋಂದಣಿ ಪ್ರಮಾಣ ಪತ್ರಗಳ ಝೆರಾಕ್ಸ್ ಪ್ರತಿಗಳಿಗೆ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯನ್ನು ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ, ರೂಮ್ ನಂ–107, ಮೊದಲನೆ ಮಹಡಿ, ಗದಗ ಇವರಿಗೆ ಆಗಸ್ಟ್ 1 ರಂದು ಸಂಜೆ 5 ಗಂಟೆಯೊಳಗೆ ಸಲ್ಲಿಸಬೇಕು.

ಆನ್‌ಲೈನ್‌ನಲ್ಲಿ ವಿಳಾಸ: swdservices.karnataka.gov.in (SC Online Application, Stipend to LAW Graduation) twd.karnataka.gov.in (ST Online Application, Stipend to LAW Graduation) ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಗದಗ ದೂ.ಸಂ. 08372–231828 ಇಲ್ಲಿ ಸಂಪರ್ಕಿಸಬಹುದಾಗಿದೆ.

ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದ ವ್ಯಾಪ್ತಿಗೆ ಬರುವ ವಿಭಾಗೀಯ ಕಾರ್ಯಾಗಾರ, ಗದಗ, ರೋಣ, ಲಕ್ಷೇಶ್ವರ, ನರಗುಂದ, ಮುಂಡರಗಿ, ಬೆಟಗೇರಿ, ಗಜೇಂದ್ರಗಡ ಹಾಗೂ ಶಿರಹಟ್ಟಿ ಘಟಕಗಳಲ್ಲಿ ಮೆಕ್ಯಾನಿಕ್ (ಡೀಸಲ್), ವೆಲ್ಡರ್, ಫಿಟ್ಟರ್, ಎಲೆಕ್ಟ್ರಿಶಿಯನ್, ಎಂ.ವಿ.ಬಿ.ಬಿ. ವೃತ್ತಿಗಳಲ್ಲಿ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು www.apprenticeshipindia.gov.in ನಲ್ಲಿ ನೋಂದಣಿ ಮಾಡಿಕೊಂಡು ಸದರಿ ಪೋರ್ಟಲ್‌ನಿಂದ ಡಿವಿಜನಲ್ ಕಂಟ್ರೋಲರ್, ವಾ.ಕ.ರ.ಸಾ.ಸಂಸ್ಥೆ, ಗದಗ ವಿಭಾಗ ಈ ವಿಳಾಸಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಜುಲೈ 15ರಂದು ಬೆಳಿಗ್ಗೆ 10.30 ಗಂಟೆಗೆ ಕಚೇರಿ ಸಮಯದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗತಕ್ಕದ್ದು ಎಂದು ವಾ.ಕ.ರ.ಸಾ.ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಯೋಗಾಭ್ಯಾಸ ನಿತ್ಯದ ಚಟುವಟಿಕೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೈನಂದಿನ ಜೀವನದಲ್ಲಿ ದೈಹಿಕ ಹಾಗೂ ಮಾನಸಿಕ ಸದೃಢತೆ ಕಾಪಾಡಿಕೊಳ್ಳಲು ಯೋಗವು ಮುಖ್ಯ ಪಾತ್ರ ವಹಿಸುತ್ತದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಭಿಪ್ರಾಯಪಟ್ಟರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಯತ್, ಜಿಲ್ಲಾ ಆಯುಷ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಇಲಾಖೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನಗರಸಭೆ ಗದಗ–ಬೆಟಗೇರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ 10ನೇ 'ಅಂತಾರಾಷ್ಟ್ರೀಯ ಯೋಗ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮಗೆ ದಿನನಿತ್ಯ ಆಹಾರ ಮತ್ತು ನೀರಿನ ಅವಶ್ಯಕತೆಯಂತೆಯೇ ಯೋಗವನ್ನು ಸಹ ರೂಢಿಸಿಕೊಳ್ಳಬೇಕು. ದೈನಂದಿನ ಚಟುವಟಿಕೆಗಳನ್ನು ಸರಿಯಾಗಿ ನಿರ್ವಹಿಸಲು ಯೋಗವು ಸಹಾಯಕಾರಿಯಾಗುತ್ತದೆ. ಪ್ರತಿಯೊಬ್ಬರೂ ಮನಸ್ಸು ಮತ್ತು ದೇಹದ ಸಮತೋಲನವನ್ನು ಕಾಯ್ದುಕೊಳ್ಳಲು ಪ್ರತಿನಿತ್ಯ ಸೂರ್ಯ ನಮಸ್ಕಾರ, ಪ್ರಾಣಾಯಾಮ ಮತ್ತು ಧ್ಯಾನ ಇವುಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ. ಮಲ್ಲಿಕಾರ್ಜುನ ಉಪ್ಪಿನ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ದೇಶವು ಪ್ರಪಂಚಕ್ಕೆ ಯೋಗವನ್ನು ದೊಡ್ಡ ಕೊಡುಗೆಯಾಗಿ

ಕೊಟ್ಟಿದೆ. ಆರೋಗ್ಯ ಸಂರಕ್ಷಣೆಗೆ ಯೋಗವು ಅತೀ ಮುಖ್ಯವಾಗಿದ್ದು, ಜಗತ್ತಿನ ಹಲವು ದೇಶಗಳು ಈಗ ಯೋಗ ದಿನಾಚರಣೆಯನ್ನು ಆಚರಿಸುತ್ತಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಯೋಗ ಸಂಸ್ಥೆಗಳ ಮುಖ್ಯಸ್ಥರು, ನಿಮಾ (ನ್ಯಾಶನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್), ಸರ್ಕಾರೇತರ ಸಂಘ–ಸಂಸ್ಥೆಯವರು, ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ಯೋಗಾಸಕ್ತರು ಪಾಲ್ಗೊಂಡಿದ್ದರು.

ಡಾ. ಸತೀಶ ಹೊಂಬಾಳಿ ಯೋಗಾಭ್ಯಾಸವನ್ನು ನಡೆಸಿಕೊಟ್ಟರು. ಡಾ. ಹಿರೇಗೌಡ್ರ ಕಾರ್ಯಕ್ರಮ ನಿರೂಪಿಸಿದರು. ಸಂಜೀವ ನಾರಪ್ಪನವರ ವಂದಿಸಿದರು. ಬ್ರಹ್ಮಕುಮಾರಿ ಅಕ್ಕನವರು ಧ್ಯಾನ ಹಾಗೂ ಶಾಂತಿ ಮಂತ್ರವನ್ನು ಪ್ರಸ್ತುತಪಡಿಸಿದರು. ಇದೇ ಸಂದರ್ಭದಲ್ಲಿ ಶ್ರೇಯಾ ಸಂಜೀವ ಪಾಂಡ್ರೆ ಹಾಗೂ ಸಂಗಡಿಗರು ಯೋಗ ಪ್ರತಿಭೆ ಪ್ರದರ್ಶಿಸಿದರು.

ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ ಮಾತನಾಡಿ, ನಾವು ಈಗ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸುತ್ತಿರುವುದು ಸಂತಸದ ವಿಷಯವಾಗಿದೆ. ಪ್ರತಿದಿನವು ನಾವು ನಮ್ಮ ಆರೋಗ್ಯ ಸಂರಕ್ಷಣೆಗೆ ಸ್ವಲ್ಪ ಸಮಯವನ್ನು ಮೀಸಲಿರಿಸಿ ಯೋಗಾಭ್ಯಾಸದಲ್ಲಿ ತೊಡಗಬೇಕು. ಇದರಿಂದ ಮಾನಸಿಕ ಹಾಗೂ ದೈಹಿಕ ಸ್ವಾಸ್ಥ್ಯ ಕಾಪಾಡಿಕೊಳ್ಳಬಹುದಾಗಿದೆ. ಯೋಗಾಭ್ಯಾಸದಲ್ಲಿ ತೊಡಗಲು ಎಲ್ಲರೂ ಜಾಗೃತರಾಗಬೇಕೆಂದರು.

ಗಜೇಂದ್ರಗಡದಲ್ಲಿ ಜಿಲ್ಲಾಧಿಕಾರಿಗಳಿಂದ ಜನಸ್ಪಂದನ ಕಾರ್ಯಕ್ರಮ

ಮೂಲಭೂತ ಸೌಲಭ್ಯಕ್ಕೆ ಆಗ್ರಹಿಸಿ ನೂರಾರು ಅರ್ಜಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತದಿಂದ ಶುಕ್ರವಾರ ನಡೆದ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ 142 ಅರ್ಜಿಗಳನ್ನು ಜಿಲ್ಲಾಧಿಕಾರಿಗಳು ಸ್ವೀಕರಿಸಿದರು.

ಈ ಹಿಂದೆ ಹಂಡೇವಜಿರ ಅವರಿಗೆ 2ಎ ಜಾತಿ ಪ್ರಮಾಣ ನೀಡಲಾಗುತ್ತಿತ್ತು. ಈಗ 2ಎ ಪ್ರಮಾಣಪತ್ರ ನೀಡುವ ಬದಲು ತಮಗೆ ತಿಳಿದಂತೆ ಜಾತಿ ಪ್ರಮಾಣ ನೀಡಲಾಗುತ್ತಿದೆ. ಪರಿಣಾಮ ಒಂದೇ ಮನೆಯಲ್ಲಿ ಒಬ್ಬರಿಗೆ 2ಎ ನೀಡಿದರೆ, ಮತ್ತೊಬ್ಬರಿಗೆ 3ಬಿ ಜಾತಿ ಪ್ರಮಾಣ ಪತ್ರ ನೀಡಲಾಗಿದೆ.

ಹೀಗಾಗಿ ಹಂಡೆವಜೀರ ಸಮುದಾಯಕ್ಕೆ ಎದುರಾಗಿರುವ ಜಾತಿ ಪ್ರಮಾಣ ಪತ್ರದ ಸಮಸ್ಯೆಗೆ ಪರಿಹಾರ ಒದಗಿಸುವಂತೆ ಮನವಿ ಸಲ್ಲಿಕೆಯಾದವು. ಉಣಚಗೇರಿ ಗ್ರಾಮದಲ್ಲಿನ ಕೋಳಿ ಫಾರ್ಮ್ ತೆರವಿಗೆ ಈ ಹಿಂದಿನ ಜನಸ್ಪಂದನ ಸಭೆಯಲ್ಲಿ ನೀಡಿದ್ದ ಮನವಿ ಪ್ರಯೋಜನವಾಗಿಲ್ಲ ಎಂದಾಗ, 15 ದಿನದೊಳಗೆ ಸಮಸ್ಯೆಗಳಿಗೆ ಪರಿಹಾರ

ಕಂಡುಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಪುರಸಭೆಯ ಹಂಗಾಮಿ ಅಧ್ಯಕ್ಷ, ಮಾಜಿ ಚೇರಮನ್ ಸೇರಿ ಪುರಸಭೆಯ ಬಾಗಶಃ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಪಟ್ಟಣದ ವ್ಯಾಪ್ತಿಯ ವಿವಿಧ ವಾರ್ಡಗಳಲ್ಲಿ ಚರಂಡಿ, ರಸ್ತೆ ಹದಗೆಟ್ಟಿದ್ದು ದುರಸ್ತಿ ಕೆಲಸಕ್ಕೂ ಸಹ ಅನುದಾನವಿಲ್ಲ. ಹೊಸ ರಸ್ತೆ ಸೇರಿ ಇತರೆ ಕಾಮಗಾರಿಗೆ ಅನುದಾನ ಬಂದಿಲ್ಲ. ಅಲ್ಲದೆ ಸದಸ್ಯರ ಗಮನಕ್ಕೆ ಬಾರದೆ ಕೆಲ ಅನವಶ್ಯಕ ಕಾಮಗಾರಿ ನಡೆಸುವುದರ ಜತೆಗೆ ಪುರಸಭೆ ಸದಸ್ಯರನ್ನು ಕನಿಷ್ಠವಾಗಿ ನಡೆಸಿಕೊಳ್ಳುತ್ತಿದ್ದು, ಸಾರ್ವಜನಿಕ ಸೇವೆಗೆ ತೊಂದರೆ ಕೊಡಲಾಗುತ್ತಿದೆ. ರಾಜೀವ ಗಾಂಧಿ ವಸತಿ ನಿಗಮದಲ್ಲಿ ಸ್ಥಳೀಯ 183/1 ಮತ್ತು 183/3ರಲ್ಲಿ ಬಾಕಿ ಉಳಿದ 18 ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವಂತೆ ಆದೇಶವಿದ್ದರೂ ಅಧಿಕಾರಿಗಳು ಹಕ್ಕುಪತ್ರ ನೀಡುತ್ತಿಲ್ಲ ಎಂದು ದೂರಿದ ಬಳಿಕ ಜಿಲ್ಲಾಧಿಕಾರಿಗಳು, ಸ್ಥಳದಲ್ಲಿದ್ದ ಅಧಿಕಾರಿಗಳಲ್ಲಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ತಿಳಿಸಿದರು.

ಈ ವೇಳೆ ಜಿ.ಪಂ ಸಿಇಒ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ್ರ, ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ, ಸಿಪಿಐ ಎಸ್.ಎಸ್. ಬಿಳಗಿ, ಬಿಇಒ ರುದ್ರಪ್ಪ ಹುರಳಿ ಸೇರಿ ತಾಲೂಕಾ ಮಟ್ಟದ ಅಧಿಕಾರಿಗಳು ಇದ್ದರು.

ಸಮೀಪದ ಕಿತ್ತೂರ ರಾಣಿ ಚೆನ್ನಮ್ಮ ಶಾಲೆಯವರು ತಮ್ಮ ಜಮೀನಿನಲ್ಲಿ ನಿರ್ಮಿಸಿಕೊಂಡಿರುವ ತಡೆಗೊಡೆಯನ್ನು ತೆರವುಗೊಳಿಸುವಂತೆ, ಪಟ್ಟಣದ 22ನೇ ವಾರ್ಡಿನಲ್ಲಿ ರಸ್ತೆಗಳು ಹೊಂಡಗಳಾಗಿವೆ, ಮಳೆ ನೀರು ಮನೆಗಳಿಗೆ ನುಗ್ಗುತ್ತಿದೆ ಎಂದು, 13ನೇ ವಾರ್ಡಿನ ಬಾಲಕಿಯರ ಮಾದರಿ ಶಾಲೆಯಲ್ಲಿ ಶೌಚಾಲಯ ಹಾಗೂ ಇತರ ಸಮಸ್ಯೆಗಳ ಪರಿಹಾರ ಒದಗಿಸಲು, ಬೆಳೆ ಪರಿಹಾರ ಸೇರಿ ಮೂಲಭೂತ ಸೌಲಭ್ಯಕ್ಕೆ ಆಗ್ರಹಿಸಿದ ಅರ್ಜಿಗಳು ಸಲ್ಲಿಕೆಯಾದವು.

ಅಂಗಡಿಗಳ ಮೇಲೆ ಕೋಟ್ಪಾ ದಾಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಅವರ ಮಾರ್ಗದರ್ಶನದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ತನಿಖಾದಳ ಶುಕ್ರವಾರ ನರಸಾಪೂರ, ಎಸ್.ಬಿ. ನಗರ ಬೆಟಗೇರಿ ಹಾಗೂ ಕನಗಿನಾಳ ಅಗಸಿ ಸ್ಥಳಗಳಲ್ಲಿ ಕೋಟ್ಪಾ ದಾಳಿಮಾಡಿ ಒಟ್ಟು 12 ಪ್ರಕರಣಗಳನ್ನು ದಾಖಲಿಸಿ ರೂ. 2200 ದಂಡ ಸಂಗ್ರಹಿಸಲಾಯಿತು.

ದಾಳಿ ವೇಳೆ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಹಾಗೂ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ–2003ರ ಕುರಿತು ಸಾರ್ವಜನಿಕರಲ್ಲಿ ಹಾಗೂ ಅಂಗಡಿಕಾರರಲ್ಲಿ ಜಾಗೃತಿ ಮೂಡಿಸಲಾಯಿತು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ಪ್ರತಿಯೊಂದು ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕ ಬಿತ್ತರಿಸುವದು ಸ್ಥಳದ ಮಾಲೀಕರ ಜವಾಬ್ದಾರಿ ಎಂದು ಜಾಗೃತಿ ಮೂಡಿಸಲಾಯಿತು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದರಿಂದ ಅಮಾಯಕರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವದು ಕಂಡುಬಂದಿ ದ್ದರಿಂದ ಅಂಗಡಿಕಾರರು ತಂಬಾಕು ಉತ್ಪನ್ನಗಳ ಕಾಣುವಂತೆ ಪ್ರದರ್ಶಿಸುವದು, ಅವುಗಳ ಕುರಿತ ಜಾಹಿರಾತು ಸೇರಿದಂತೆ 18 ವರ್ಷದೊಳಗಿನವರಿಗೆ ತಂಬಾಕು ನಿಷೇಧ, ಶಾಲಾ–ಕಾಲೇಜು ಸುತ್ತ 100 ಗಜದವರೆಗೆ ತಂಬಾಕು ನಿಷೇಧ ಈ ಕುರಿತು ಮಾಹಿತಿ ಹಾಗೂ ಜಾಗೃತಿ ಮೂಡಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಎಚ್ಚರಿಕೆ ನೀಡಿದರು.

ದಾಳಿಯಲ್ಲಿ ಗೋಪಾಲ ಸುರಪುರ, ವಿ.ಆರ್. ಬರಮಗೌಡರ ಹಾಗೂ ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸದ್ಯಸರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ 'ಜನಸ್ಪಂದನ' । ಸರ್ವೇ ಇಲಾಖೆಗೆ ಸಂಬಂಧಿಸಿ ಅಧಿಕ ಅರ್ಜಿ

ಅಕ್ರಮ ದಂಧೆಗೆ ಲಗಾಮು ಹಾಕಿ

■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಗುರುಭವನದಲ್ಲಿ ಶುಕ್ರವಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲೂಕಾ ಮಟ್ಟದ ಜನಸ್ಪಂದನ ಸಭೆ ಜರುಗಿತು. ಮಲ್ಲಾಪೂರ ಸೇರಿದಂತೆ ರೋಣ ತಾಲೂಕಿನ ಎಲ್ಲ ಗ್ರಾಮಗಳಲ್ಲಿಯೂ ಆಕ್ರಮ ದಂಧೆಗಳು ಎಗ್ಗಿಲ್ಲದೆ ನಡೆಯುತ್ತಿದ್ದರೂ ಸಹ ಅಬಕಾರಿ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ ಎಂದು ನೀಲಪ್ಪಗೌ

ಡಾ. ಎಸ್.ಕೆ. ಪಲ್ಲೇದ ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜೂನ್ 22ರ ಸಂಜೆ 6 ಗಂಟೆಗೆ ಸಿದ್ಧಲಿಂಗನಗರದ ಬಸವೇಶ್ವರ ಪ್ರೌಢಶಾಲೆ, ಬಸವ ಯೋಗ ಮಂದಿರದಲ್ಲಿ ಡಾ. ಎಸ್.ಕೆ. ಪಲ್ಲೇದ ಸ್ಮರಣೆಯಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಯೋಗ ಮತ್ತು ಆಯುರ್ವೇದ ವಿಷಯವಾಗಿ ನಿವೃತ್ತ ಪ್ರಾಚಾರ್ಯರು, ಹೆಸರಾಂತ ವೈದ್ಯರಾದ ಡಾ. ಉಮೇಶ ಪುರದ ಅವರಿಂದ ಉಪನ್ಯಾಸ ಜರುಗಲಿದೆ. ಡಾ. ಎಸ್.ಕೆ. ಪಲ್ಲೇದ ಅವರ ಸಂಸ್ಮರಣೆಯನ್ನು ಡಾ. ದತ್ತಪ್ರಸನ್ನ ಪಾಟೀಲ ಮಾಡುವರು. ದತ್ತಿ ದಾನಿಗಳು ಹಾಗೂ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯರಾದ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಗಡಿ ಭಾಗದ ಕನ್ನಡ ಶಾಲೆಗಳಿಗೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಗಡಿಭಾಗ ಬೆಳಗಾವಿಯಲ್ಲಿ ಕನ್ನಡ ಶಾಲೆಯನ್ನು ಮುಚ್ಚಲು ಹಾಗೂ ಕನ್ನಡಿಗರ ಮೇಲೆ, ಕನ್ನಡ ಭಾಷೆಯ ಮೇಲೆ ಯಾವುದೇ ತೆರನಾದ ದಬ್ಬಾಳಿಕೆ ಮಾಡಲು ಬಂದರೆ ಜಯ ಕರ್ನಾಟಕ ಜನಪರ ವೇದಿಕೆಯ ವತಿಯಿಂದ ಹೊರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಜಯ ಕರ್ನಾಟಕ ಜನಪರ ವೇದಿಕೆ ಯುವ ಸಂಸ್ಥಾಪಕ ಅಧ್ಯಕ್ಷ ಬಿ.ಗುಣರಂಜನಶೆಟ್ಟಿ, ವೇದಿಕೆಯ ರಾಜ್ಯಾಧ್ಯಕ್ಷ ಜಿ ಶ್ರೀನಿವಾಸ ಹಾಗೂ ರಾಜ್ಯ ಉಪಾಧ್ಯಕ್ಷ ಹಾಲಪ್ಪ ವರವಿ ಎಚ್ಚರಿಸಿದ್ದಾರೆ.

ಕರ್ನಾಟಕದಲ್ಲಿ ಕನ್ನಡ ಶಾಲೆಯಲ್ಲಿ ಕನ್ನಡಕ್ಕೆ ಒತ್ತು ಕೊಡಬೇಕು. ಕರ್ನಾಟಕ ಸರ್ಕಾರದ ಕನ್ನಡ ಶಾಲೆಗಳಿಗೆ ಸೌಲಭ್ಯಗಳನ್ನು ಒದಗಿಸಿ, ಶಿಕ್ಷಣಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶ ನೀಡಿ, ಕರ್ನಾಟಕದ ಕನ್ನಡ ಶಾಲೆಗಳನ್ನು ಬಲಿಷ್ಠಗೊಳಿಸಬೇಕು ಮತ್ತು ಕನ್ನಡ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಬೇಕೆಂದು ಮುಖ್ಯಮಂತ್ರಿಗಳಿಗೆ ಪತ್ರಿಕಾ ಪ್ರಕಟಣೆಯ ಮೂಲಕ ವೇದಿಕೆಯ ವತಿಯಿಂದ ಆಗ್ರಹಿಸಿದ್ದಾರೆ.

ರೇಣುಕಾಸ್ವಾಮಿ ಮೊಬೈಲ್ ಪತ್ತೆಗೆ ಪೌರ ಕಾರ್ಮಿಕರ ಬಳಕೆ: ನೋಟಿಸ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಟ ದರ್ಶನ್ ಬಂಧಿತರಾಗಿರುವ ಪ್ರಕರಣದಲ್ಲಿ ಕೊಲೆಯಾಗಿರುವ ರೇಣುಕಾಸ್ವಾಮಿಯ ಮೊಬೈಲ್ ಫೋನ್ ಹುಡುಕಲು ಪೌರ ಕಾರ್ಮಿಕರನ್ನು ರಾಜಕಾಲುವೆಗೆ ಇಳಿಸಿದ ಬಿಬಿಎಂಪಿಗೆ ಸಮಾಜ ಕಲ್ಯಾಣ ಇಲಾಖೆ ನೋಟಿಸ್ ನೀಡಿದೆ.ರೇಣುಕಾಸ್ವಾಮಿಯ ಮೊಬೈಲ್ ಹುಡುಕಲು ಮೂತ್ರದಿಂದ ತುಂಬಿದ ಕೊಳಚೆ ಕಾಲುವೆಗೆ ಅಮಾಯಕ ಪರಿಶಿಷ್ಟ ಜಾತಿ ವರ್ಗದ ಪೌರ ಕಾರ್ಮಿಕರನ್ನು ಯಾವುದೇ ಸುರಕ್ಷಾ ವಿಧಾನಗಳಿಲ್ಲದೆ ಇಳಿಸಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಡಿಎಸ್ಎಸ್) ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗಕ್ಕೆ ದೂರು ನೀಡಿತ್ತು.

ಶೃದ್ಧಾಂಜಲಿ ಸಭೆ

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕು ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿದ್ದ ರಾಜಣ್ಣ ಹೊಲಿ ನಿಧನರಾದ ಹಿನ್ನೆಲೆಯಲ್ಲಿ ಸಂಘದ ಕಾರ್ಯಾಲಯದಲ್ಲಿ ಶೃದ್ಧಾಂಜಲಿ ಸಭೆ ಏರ್ಪಡಿಸಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಸಂಘದ ಪ್ರಭಾರಿ ಅಧ್ಯಕ್ಷ ಸೋಮು ಬಿ.ಚರೇದ ವಹಿಸಿದ್ದರು. ಸಭೆಯಲ್ಲಿ ರೋಣ ತಾಲೂಕು ಬಣಜಿಗ ಸಮಾಜದ ಅಧ್ಯಕ್ಷ ಮುತ್ತಣ್ಣ ಸಂಗಳದ, ಕಾರ್ಯಾಧ್ಯಕ್ಷ ವೀರಣ್ಣ ಶೆಟ್ಟರ್, ಉಪಾಧ್ಯಕ್ಷ ಸಂಗಣ್ಣ ಮೆಣಸಿನಕಾಯಿ, ಶರಣಪ್ಪನವರು ಜಕ್ಕಲಿ, ವೀರಣ್ಣ ನವಲಗುಂದ, ಪಟ್ಟಣಶೆಟ್ಟಿ, ಮುತ್ತಣ್ಣ ಮುಂತಾದವರು ಮಾತನಾಡಿದರು.

ಸಭೆಯಲ್ಲಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಪ್ರಕಾಶ ಹೊಸಮನಿ, ಶಿವಣ್ಣ ಯಾವಗಲ್ಲ, ಉಮೇಶ್ ಅಮರಗಟ್ಟಿ, ಕಿರಣ ಚನ್ನವಿರಶೆಟ್ಟರ, ಜಗದೀಶ್ ಭಜಂತ್ರಿ, ಉಮೇಶ ಚವಡಿ ಶೇಕಪ್ಪ ಐಹೊಳೆ, ಮುಂತಾದವರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರರ ತಂದೆ ವೀರಪ್ಪ ಸಂಕನೂರ ಹಾಗೂ ಸಮಾಜದ ಮುತ್ತಣ್ಣ ಜಕ್ಕಲಿ ಇವರ ಅಕಾಲಿಕ ನಿಧನಕ್ಕೆ ಸಂತಾಪ ಸೂಚಿಸಲಾಯಿತು.

'ಯೋಗ' ಜೀವನದ ಪ್ರಮುಖ ಅಂಗ

■ ವಿಜಯಸಾಕ್ಷಿ ಸುದ್ದಿ, ಗದಗ

10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ಯೋಗ ಜೀವನದ ಪ್ರಮುಖ ಅಂಗವಾಗಿದ್ದು, ಮಾನಸಿಕ ಹಾಗೂ ದೈಹಿಕವಾಗಿ ಸುಸ್ಥಿರ ವಾಗಿರಬೇಕಾದರೆ ಪ್ರತಿದಿನ ಯೋಗ ಮಾಡಬೇಕು ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಾದರಾಜೇಶ್ವರ ಎಸ್ ಶೆಟ್ಟಿ ನುಡಿದರು.

ಅವರು ಗದಗ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆಯುಷ್ ಇಲಾಖೆ, ಆರೋಗ್ಯ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಎಚ್.ಬೆನಕಟ್ಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರಾದ ಜಿ.ಆರ್. ಶೆಟ್ಟರ, ಪ್ರಧಾನ ದಿವಾಣಿ ನ್ಯಾಯಾಧೀಶರಾದ ಎಸ್.ಎಸ್. ತಳವಾರ, 1ನೇ ಜೆಎಂಎಫ್ಸಿ ನ್ಯಾಯಾಧೀಶರಾದ ಬಿ.ವೈ. ಕರಗುದರಿ, 2ನೇ ಜೆಎಂಎಫ್ಸಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ಜಂಟಿ ಕಾರ್ಯದರ್ಶಿ ಪ್ರಕಾಶ ಕಣಗಿನಹಾಳ, ವಕೀಲ ರಾದ ಶಾರದಾಕವಲೂರ ಪಾಲ್ಗೊಂಡಿದ್ದರು.

ಸಮಾರಂಭದ ಅಧ್ಯಕ್ಷತೆ ಯನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ವಹಿಸಿದ್ದರು. ಯೋಗ ಕಾರ್ಯಕ್ರಮವನ್ನು ಜಿಲ್ಲಾ ಆಯುಷ್ ಇಲಾಖೆಯ ಯೋಗ ಶಿಕ್ಷಕಕರಾದ ಶಶಿಕಲಾ ಜೋಗರಡ್ಡಿ ನೆರವೇರಿಸಿಕೊಟ್ಟರು.

ಸಮಾರಂಭದಲ್ಲಿ ನ್ಯಾಯಾಲಯಗಳ ಸಿಬ್ಬಂದಿ, ವಕೀಲರು ಪಾಲ್ಗೊಂಡಿದ್ದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಶಿರಸ್ತೇದಾರ ಬಸವರಾಜ ಕುಕನೂರ ಕಾರ್ಯಕ್ರಮ ನಿರ್ವಹಿಸಿದರು.

ಇಂದಿನ ಒತ್ತಡದ ಬದುಕಿನಲ್ಲಿ ಪ್ರತಿನಿತ್ಯ ಯೋಗ, ಪ್ರಾಣಾಯಾಮ ಮಾಡುವುದರಿಂದ ಆರೋಗ್ಯಕರ ವಾದ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ನ್ಯಾ. ರಾಜೇಶ್ವರ ಶೆಟ್ಟಿ ತಿಳಿಸಿದರು.

ವಿಶ್ವ ಯೋಗ ದಿನಾಚರಣೆ ಅಂಗವಾಗಿ ಸಂಕನೂರ ಕಾಲೇಜ್ ಆಫ್ ನರ್ಸಿಂಗ್ ಹಾಗೂ ಐ.ಪಿ.ಸಿ.ಎ ಫಾರ್ಮಾ ಸಹಯೋಗದೊಂದಿಗೆ ಯೋಗ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಡಾ. ಪ್ರಕಾಶ ಸಂಕನೂರ ಅವರು ಏಕಾಗ್ರತೆ ಹೆಚ್ಚಿಸಲು ಸಹಾಯವಾಗುವ ಯೋಗಾಸನಗಳನ್ನು ತಿಳಿಸಿಕೊಟ್ಟರು. ಐ.ಪಿ.ಸಿ.ಎ ಫಾರ್ಮಾ ಸೀನಿಯರ್ ರೀಜನಲ್ ಮ್ಯಾನೇಜರ್ ನಾಗಭೂಷಣಯ್ಯ, ವಿನಯಕುಮಾರ, ಕಾಲೇಜಿನ ಎಲ್ಲ ಪ್ರಾಧ್ಯಾಪಕರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಯೋಗಭ್ಯಾಸದಲ್ಲಿ ಪಾಲ್ಗೊಂಡಿದ್ದರು.

ಲಾಲಸಾಬ ಅರಗಂಜಿ ಜನ್ಮದಿನದ ಪ್ರಯುಕ್ತ ನೋಟ್‌ಬುಕ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಶಿರೋಳ ಗ್ರಾಮದ ಶ್ರೀ ತೋಂಟದಾರ್ಯ ಸರಕಾರಿ ಮಾದರಿ ಕೇಂದ್ರ ಶಾಲೆಯಲ್ಲಿ ಲಾಲಸಾಬ ಅರಗಂಜಿ ಅಭಿಮಾನಿ ಬಳಗದ ವತಿಯಿಂದ ಲಾಲಸಾಬ ಅರಗಂಜಿ ಅವರ ಜನ್ಮದಿನದ ಪ್ರಯುಕ್ತ ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ನೋಟ್ ಪುಸ್ತಕ ಹಾಗೂ ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ದಿವ್ಯ ಸಾನ್ನಿಧ್ಯ ವಹಿಸಿದ್ದ ತೋಂಟದಾರ್ಯ ಮಠ ಶಿರೋಳದ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ, ಲಾಲಸಾಬ ಅರಗಂಜಿ ಅವರು ಅವರ ತಂದೆಯ ಕಾಲದಿಂದಲೂ ಶಿಕ್ಷಣಕ್ಕೆ ಮಹತ್ವ ನೀಡುತ್ತಾ ಬಂದಿದ್ದಾರೆ. ತಂದೆಯವರ ಮಾರ್ಗದಲ್ಲೇ ನಡೆಯುತ್ತಿರುವ ಇವರು ಸದಾ ಗಾಳಿ, ಬೆಳಕಿನಂತೆ ಕ್ರಿಯಾಶೀಲರಾಗಿ ಸಾಮಾಜಿಕ ಜೀವನದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಅಲ್ಲದೇ 2024ನೇ ಸಾಲಿನ ತೋಂಟದಾರ್ಯ ಜಾತ್ರೆಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿ ಶಿರೋಳ ಗ್ರಾಮದ ತೋಂಟದಾರ್ಯ ಮಠದ ಭಾವಕ್ಯತೆಯ ಮೆರುಗನ್ನು ಜಗತ್ತಿನೆಲ್ಲೆಡೆ ಪಸರಿಸುವಂತೆ ಮಾಡಿದ್ದಾರೆ ಎಂದರು.

ಶ್ರೀ ಮಾದಾರ ಚೆನ್ನಯ್ಯ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ಸಾಲಿಮಠ ಗುರುಗಳು ಮಾತನಾಡಿ, ದುಂದು ವೆಚ್ಚದ ಜನ್ಮದಿನಕ್ಕೆ ಕಡಿವಾಣ ಹಾಕಿ ಇಂತಹ ಆದರ್ಶ ಮತ್ತು ಮಾದರಿಯಾಗುವಂತಹ ಕೆಲಸಗಳನ್ನು ಮಾಡುವ ಮೂಲಕ ಲಾಲಸಾಬ ಅರಗಂಜಿ ಅಭಿಮಾನಿ ಬಳಗವು ಮೌಲ್ಯವುಳ್ಳ ಔಚಿತ್ಯಪೂರ್ಣ ಕಾರ್ಯವನ್ನು ಮಾಡಿದೆ ಎಂದರು.

ಟಿ.ಜಿ.ಎಂ.ಸಿ.ಎಸ್ ಪ್ರಧಾನಗುರು ಎಸ್.ಎಂ. ಶಿರಿ ಅಧ್ಯಕ್ಷತೆ ವಹಿಸಿದ್ದರು. ಶರಣಪ್ಪ ಕಾಡಪ್ಪನವರ, ಎಸ್.ಬಿ. ದಾಸರ, ಎಸ್. ಕೆ. ಮೂಲಿಮನಿ, ಎ.ಬಿ. ಅಸೂಟಿ ಪಾಲ್ಗೊಂಡಿದ್ದರು. ಕೆ.ಜಿ.ಎಸ್ ಶಾಲೆಯ ಶಿಕ್ಷಕ ಎ.ವಿ. ಹಲಗತ್ತಿ ಪ್ರಾಸ್ತಾವಿಕ ನುಡಿಯನ್ನಾಡಿದರು. ಪಿ.ಎಸ್. ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಲಾಲಸಾಬ ಅರಗಂಜಿ ಅಭಿಮಾನಿ ಬಳಗದ ಬೀರಪ್ಪ ಕಾಡಪ್ಪನವರ, ಅಕ್ಷಯ ಗಡೇಕಾರ, ರಾಜೇಸಾಬ ಚಳ್ಳಮರದ, ಗಿರೀಶ ಗಾಣಿಗೇರ, ಸದ್ದಾಂ ಯಲಿಗಾರ, ರಫೀಕ ಮೂಲಿಮನಿ, ಶರಣಪ್ಪ ಮಡಿವಾಳರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಏಕಬೆಳೆ ಪದ್ಧತಿಯಿಂದ ಮಣ್ಣಿನ ಫಲವತ್ತತೆಗೆ ಕುತ್ತು

ರೈತ ಬಾಂಧವರಿಗೆ ಸಲಹೆ

■ ವಿಜಯಸಾಕ್ಷಿ ಸುದ್ದಿ, ಗದಗ

ರೈತರು ಹೆಸರು, ಮುಸುಕಿನ ಜೋಳ, ಜೋಳ, ಶೇಂಗಾ ಬೆಳೆಗಳನ್ನು ಏಕಬೆಳೆ ಪದ್ಧತಿಯಲ್ಲಿ ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುವುದರ ಜೊತೆಗೆ ಕೀಟ/ರೋಗ ಬಾಧೆ ಹೆಚ್ಚಾಗುವ ಸಾಧ್ಯತೆ ಇದೆ.

ರೈತರು ಏಕದಳ ಧಾನ್ಯಗಳ ಜೊತೆಗೆ ದ್ವಿದಳ ಧಾನ್ಯಗಳನ್ನು ಹಾಗೂ ಎಣ್ಣೆಕಾಳು ಬೆಳೆಗಳ ಜೊತೆಗೆ ದ್ವಿದಳ ಧಾನ್ಯಗಳನ್ನು ಅಂತರ ಬೆಳೆಯಾಗಿ ಬೆಳೆದಲ್ಲಿ ಮಣ್ಣಿನ ಫಲವತ್ತತೆಯನ್ನು ಕಾಯ್ದುಕೊಳ್ಳಬಹುದು. ಮುಖ್ಯ ಬೆಳೆಯ ಜೊತೆ ಹೆಚ್ಚುವರಿಯಾಗಿ ಮಿಶ್ರ ಬೆಳೆಯ ಇಳುವರಿಯನ್ನು ಪಡೆಯುವುದರಿಂದ ರೈತರು ತಮ್ಮ ಆದಾಯವನ್ನು ಹೆಚ್ಚಿಸಿಕೊಳ್ಳಬಹುದು. ದ್ವಿದಳಧಾನ್ಯ ಬೆಳೆಗಳು ವಾತಾವರಣದಲ್ಲಿರುವ ಸಾರಜನಕವನ್ನು ಹೀರಿಕೊಂಡು ಬೇರುಗಳಲ್ಲಿ ಸ್ಥಿರೀಕರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು. ಬೆಳೆ ವೈವಿಧ್ಯತೆ ಇರುವುದರಿಂದ ಮುಖ್ಯ ಬೆಳೆಗೆ ಬರುವ ಕೀಟ/ರೋಗ ಬಾಧೆಯನ್ನು ಕೂಡ ಗಣನೀಯವಾಗಿ ಕಡಿಮೆ ಮಾಡಬಹುದು.

ಅಲ್ಲದೇ, ಕುಟುಂಬಕ್ಕೆ ಬೇಕಾಗುವ ಸಮತೋಲನ ಆಹಾರ ಉತ್ಪಾದನೆ ಮಾಡುವುದರ ಮೂಲಕ ಕುಟುಂಬದ ಆರೋಗ್ಯವನ್ನು ಕಾಪಾಡಬಹುದಾಗಿದೆ.

ಮಧ್ಯಮ ಆಳದ ಕಪ್ಪು ಮಣ್ಣಿಗೆ ತೊಗರಿ ಆಧಾರಿತ ಅಂತರ ಬೆಳೆ ಪದ್ಧತಿಯಲ್ಲಿ 1 ಸಾಲು ತೊಗರಿ ಮತ್ತು 2 ಸಾಲು ನವಣೆಯನ್ನು ಬೆಳೆಯುವುದು ಲಾಭದಾಯಕ. ಶೇಂಗಾ+ತೊಗರಿ/ಸಜ್ಜೆ/ನವಣೆ(4:1 ಅಥವಾ 11:1) ಅಂತರ ಬೆಳೆಯಾಗಿ ಬೆಳೆಯುವುದು ಸೂಕ್ತ. ಔಡಲ+ತೊಗರಿ(1:1), ಔಡಲ+ಶೇಂಗಾ(1:3, 1:5, 1:7), ಔಡಲ+ಸೂರ್ಯಕಾಂತಿ(1:1), ಔಡಲ+ಸಜ್ಜೆ(1:3), ಔಡಲ+ಜೋಳ(1:3), ಔಡಲ+ನವಣೆ/ಬರಗು(1:3) ಅಂತರ ಬೆಳೆಯಾಗಿ ಬೆಳೆಯಬಹುದು.

ಒಣ ಬೇಸಾಯದಲ್ಲಿ ಇಡೀ ಹತ್ತಿ ಬೆಳೆಗಿಂತ, ಹತ್ತಿ+ಈರುಳ್ಳಿ (1:5), ಹತ್ತಿ+ಮೆಣಸಿನಕಾಯಿ (1:1), ಹತ್ತಿ+ ಶೇಂಗಾ (1:3), ಹತ್ತಿ+ಹೆಸರು (1:1), ಹತ್ತಿ+ಬೀನ್ಸ್ (1:1), ಹತ್ತಿ+ಕೊತ್ತಂಬರಿ (1:2), ಹೈಬ್ರಿಡ್ ಬಿಟಿ ಹತ್ತಿ+ಕೊತ್ತಂಬರಿ (1:2) ನೀರಾವರಿಯಲ್ಲಿ ಹತ್ತಿ+ಸೋಯಾಅವರೆ (1:3), ಹತ್ತಿ+ಮೆಣಸಿನಕಾಯಿ (1:1) ಹಾಗೂ ಹತ್ತಿ+ಈರುಳ್ಳಿ (1:5) ಅಂತರಬೆಳೆ ಪದ್ಧತಿ ಸೂಕ್ತ. ಮುಸುಕಿನ ಜೋಳದ ಜಮೀನಿನ ಸುತ್ತಲೂ ಎಳ್ಳು/ಹುಚ್ಚೆಳ್ಳು/ಹರಳನ್ನು 4-6 ಸಾಲು ಬೆಳೆಯಬಹುದು.

ಬೆಳೆ ಪರಿವರ್ತನೆ, ಅಂತರ ಬೆಳೆ ಪದ್ಧತಿ ಹಾಗೂ ಮಿಶ್ರ ಬೆಳೆ ಪದ್ಧತಿಗಳನ್ನು ಕೈಗೊಳ್ಳಲು ರೈತ ಬಾಂಧವರಲ್ಲಿ ಮನವಿ ಮಾಡಲಾಗಿದೆ. ಇದರಿಂದ ಕೀಟ ರೋಗದ ಬಾಧೆ ಕಡಿಮೆಯಾಗಿ ಹೆಚ್ಚಿನ ಇಳುವರಿ ಪಡೆಯಬಹುದು ಹಾಗೂ ಮಣ್ಣಿನ ಫಲವತ್ತತೆಯನ್ನು ಕಾಪಾಡಲು ಸಾಧ್ಯವಾಗುತ್ತದೆ. 2024-25ನೇ ಸಾಲಿನ ಆಹಾರ ಮತ್ತು ಪೌಷ್ಟಿಕ ಭದ್ರತೆ ಯೋಜನೆಯಡಿ ಬೆಳೆ ಪರಿವರ್ತನೆಯಡಿ ಭತ್ತ (ಮುಂಗಾರು) ನಂತರ ಕಡಲೆ(ಹಿಂಗಾರು); ಅಂತರ ಬೆಳೆಯಾಗಿ ತೊಗರಿ(2 ಸಾಲು)+ಸಜ್ಜೆ (4 ಸಾಲು) ಕ್ಷೇತ್ರ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಂಗಾರು ಹಂಗಾಮಿಗೆ ಗೋವಿನ ಜೋಳ+ತೊಗರಿ ಬೆಳೆಯನ್ನು (4:2) ಅಂತರ ಬೆಳೆಯಾಗಿ ತೊಗರಿ, ಅಲಸಂದೆ, ಹೆಸರು, ಉದ್ದು ಮುಂತಾದ ಬೆಳೆಗಳನ್ನು ಊದಲಿನೊಂದಿಗೆ 4:1 ಪ್ರಮಾಣದಲ್ಲಿ ಮಿಶ್ರ ಬೆಳೆಯಾಗಿ ಎರಡು ಸಾಲು ಹತ್ತಿ ಅಥವಾ ಎರಡು ಸಾಲು ತೊಗರಿಯನ್ನು ಒಂದು ಸಾಲು ರಾಜಗಿರಿ ಬೆಳೆ ಜೊತೆಗೆ ಅಂತರ ಬೆಳೆಯಾಗಿ ಬೆಳೆಯಬಹುದು. ಕಡಿಮೆ ಆಳದ ಕಪ್ಪು ಭೂಮಿಯಲ್ಲಿ ತೊಗರಿಯನ್ನು ನವಣೆಯೊಂದಿಗೆ 2:1 ಸಾಲುಗಳ ಅನುಪಾತದಲ್ಲಿ ಅಂತರ ಬೆಳೆಯಾಗಿ ಬೆಳೆಯುವುದು ಸೂಕ್ತ (ನವಣೆಗೆ 45 ಸೆಂ.ಮೀ. ಸಾಲಿನ ಅಂತರ) ಆಳವಾದ ಕಪ್ಪು ಭೂಮಿಯಲ್ಲಿ ತೊಗರಿಯನ್ನು ಹೆಸರಿನೊಂದಿಗೆ 1:3 ಸಾಲುಗಳ ಅನುಪಾತದಲ್ಲಿ ಅಂತರ ಬೆಳೆಯಾಗಿ ಬೆಳೆಯುವುದು ಸೂಕ್ತ.

ಯೋಗ ದಿನಾಚರಣೆ, ಸಸ್ಯ ಶ್ಯಾಮಲ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಿನ ಹಳ್ಳಿಗುಡಿಯ ಸರಕಾರಿ ಪ್ರೌಢಶಾಲೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಮತ್ತು ಸಸ್ಯ ಶ್ಯಾಮಲ ಕಾರ್ಯಕ್ರಮ ಜರುಗಿತು.

ದೈಹಿಕ ಶಿಕ್ಷಣ ಶಿಕ್ಷಕಿ ಸಿ.ಟಿ. ಅರಳೆಲೆಮಠ ಮಕ್ಕಳಿಗೆ ವಿವಿಧ ಆಸನಗಳನ್ನು, ಸೂರ್ಯ ನಮಸ್ಕಾರ, ಪ್ರಾಣಾಯಾಮಗಳ ಪ್ರಾತ್ಯಕ್ಷಿಕೆ ನೀಡುವುದರ ಮೂಲಕ ಮಕ್

ಗ್ರಾಮೀಣ ಪ್ರದೇಶಗಳಲ್ಲಿ ಮುಂಗಾರಿನ ಮೊದಲ ಹಬ್ಬದ ಸಂಭ್ರಮ

ಜೀವನಾಡಿ ಎತ್ತುಗಳೊಂದಿಗೆ 'ಕಾರ ಹುಣ್ಣಿಮೆ'

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉತ್ತಮ ಮುಂಗಾರು ಮಳೆ-ಬೆಳೆಗಾಗಿ ಆಚರಿಸುವ ಮುಂಗಾರು ಪ್ರಾರಂಭದ ರೈತರ ಮೊದಲ ಹಬ್ಬ ಕಾರಹುಣ್ಣಿಮೆ. ಈ ಹಬ್ಬವನ್ನು ರೈತ ಸಮುದಾಯ ಶುಕ್ರವಾರ ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ವಿಜೃಂಭಣೆಯಿಂದ ಆಚರಿಸಿದರು.

ಹಬ್ಬದ ದಿನ ಬೆಳಿಗ್ಗೆ ಎತ್ತುಗಳ ಮೈ ತೊಳೆದು ಎಳ್ಳೆಣ್ಣೆ, ಮಜ್ಜಿಗೆ, ಅರಿಶಿಣಪುಡಿ, ಉಪ್ಪು, ತತ್ತಿಯನ್ನು ಗೊಟ್ಟ ಹಾಕುತ್ತಾರೆ. ಇದು ತಮ್ಮ ಜೀವನಾಡಿ ಎತ್ತುಗಳಿಗೆ ಯಾವುದೇ ರೋಗ-ರುಜಿನಾದಿಗಳು ತಗುಲದಿರಲೆಂದು ಮಾಡುವ ಪದ್ಧತಿ. ಬಳಿಕ ಎತ್ತುಗಳ ಕೊಂಬುಗಳನ್ನು ಪಾಲಿಶ್ ಮಾಡಿ, ಬಣ್ಣ ಹಚ್ಚಿ ಕೋಡಿನ ತುದಿಗೆ ತಾಮ್ರದ ಕೊಂಬೆಣಸು ಹಾಕಿ ರಿಬ್ಬನ್, ಬಲೂನ್ ಕಟ್ಟುತ್ತಾರೆ. ಕೊರಳಿಗೆ ಗಜ್ಜೆಪಟ್ಟಿ ಕಟ್ಟಿ ಶೃಂಗರಿಸುತ್ತಾರೆ.

ಗೋಧೂಳಿ ಸಮಯದಲ್ಲಿ ವಿಶೇಷವಾಗಿ ಅಲಂಕಾರ ಮಾಡಿದ ಎತ್ತು, ಹೋರಿಗಳನ್ನು

ರೈತರು ಊರ ಅಗಸಿ ರಸ್ತೆಯಲ್ಲಿ ಓಡಿಸುತ್ತಾ ಅದರ ಹಿಂದೆ ತಾವೂ ಓಡಿ ಸಂತಸಪಟ್ಟರು. ತಮ್ಮ ಎತ್ತುಗಳ ಮೈಮೇಲೆ ರಾಮದೂತ, ಭೂಮಿತಾಯಿ ಚೊಚ್ಚಲ ಮಗ, ಪುಣ್ಯಕೋಟಿ, ಮನೆದೇವ್ರು, ರಾಜಕುಮಾರ, ಒಡಹುಟ್ಟಿದವರು, ಮುಂಗಾರು ಮಳೆ, ನಮ್ಮ ಬಸವ ಹೀಗೆ ಬರೆದು ತಮ್ಮ ಪ್ರೀತಿ ಮೆರೆದರು. ಯಾವ ಎತ್ತುಗಳು ಮೊದಲು ಕೊಬ್ಬರಿ ಸರ ಹರಿದು ಮುಂದೆ ಓಡುತ್ತವೆಯೋ ಆ ಎತ್ತುಗಳು ಕರಿ ಹರಿದಂತೆ. ಇದು ಈ ಹಬ್ಬ ಆಚರಿಸುವ ಸಂಪ್ರದಾಯ. ಬಿಳಿ ಎತ್ತು ಕರಿ ಹರಿದರೆ ಹಿಂಗಾರು ಉತ್ತಮ ಎಂತಲೂ, ಕರಿ ಎತ್ತು ಕರಿ ಹರಿದರೆ ಮುಂಗಾರು ಉತ್ತಮ ಎಂತಲೂ ಭಾವಿಸುತ್ತಾರೆ.

ಲಕ್ಷ್ಮೇಶ್ವರದಲ್ಲಿ ದೇಸಾಯಿಬಣ, ಹುಲಗೇರಿ ಬಣ, ಪೇಠಬಣ, ಹಿರೇಬಣದ ಅಗಸಿ ಬಾಗಿಲಲ್ಲಿ ಕರಿ ಹರಿಯುವ ಹಬ್ಬ ಆಚರಿಸಲಾಯಿತು.

ಸೊಪ್ಪಿನಕೇರಿ ಓಣಿಯ ಯುವಕರು ಈ ವರ್ಷ ಕರಿ ಓಡುವ ಹಬ್ಬದಲ್ಲಿ ಪಾಲ್ಗೊಂಡ ವಿಶೇಷ ಅಲಂಕಾರಿಕ ಎತ್ತುಗಳಿಗೆ ಬಹುಮಾನ ನೀಡಿ ಪುರಸ್ಕರಿಸಿದರು. ಈ ಸ್ಪರ್ಧೆಯಲ್ಲಿ ಮುತ್ತು ಗೊಜನೂರ ಅವರ ಎತ್ತು ಪ್ರಥಮ, ಲಕ್ಷ್ಮೇಶ್ವರ ರಾಮಧೂತ ದ್ವಿತೀಯ, ಬಸವರಾಜ ಉಮಚಗಿ ಅವರ ಎತ್ತುಗಳಿಗೆ ತೃತೀಯ ಬಹುಮಾನ ನೀಡಲಾಯಿತು.

ನಂತರ ಪಟ್ಟಣದ ಆರಾಧ್ಯದೈವ ಸೋಮೇಶ್ವರನ ಸನ್ನಿಧಿಯಲ್ಲಿ ಮುಳಗುಂದ ಮನೆತನದ ಬಿಳಿ ಎತ್ತು ಕರಿ ಹರಿಯಿತು. ಎತ್ತು ಓಡಿಸುವ ದೃಶ್ಯವನ್ನು ಕಣ್ತುಂಬಿಕೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ರೈತರು, ಯುವಕರು, ಮಕ್ಕಳು ಸೇರಿದ್ದರು. ಕರಿ ಹರಿದ ಎತ್ತುಗಳ ಜತೆ ನೂರಾರು ಎತ್ತುಗಳನ್ನು ಸೇರಿಸಿ ಸಂಜೆ ಸೋಮೇಶ್ವರ ತೇರಿನಮನೆಯಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯವೈಭವದೊಂದಿಗೆ ಮೆರವಣಿಗೆ ಮಾಡಲಾಯಿತು.

ಮಾವು ಬೇಸಾಯದ ಕುರಿತು ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾವು ಬೆಳೆಯುವ ರೈತರು ಮಾವು ಅಭಿವೃದ್ಧಿ ನಿಗಮದಿಂದ ದೊರೆಯುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮಾವು ಅಭಿವೃದ್ಧಿ ನಿಗಮದ ಉಪನಿರ್ದೇಶಕ ಡಾ. ಶಿವಪ್ರಸಾದ ಬಿ.ಎಲ್ ಹೇಳಿದರು.

ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ರೈತರ ತೋಟದಲ್ಲಿ ಬುಧವಾರ ಜಿಲ್ಲಾ ಪಂಚಾಯತ, ತಾಲೂಕು ಪಂಚಾಯತ, ತೋಟಗಾರಿಕೆ ಇಲಾಖೆ, ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತ ಹಾಗೂ ಶ್ರೀ ಕಪ್ಪತ್ತಮಲ್ಲೇಶ್ವರ ತೋಟಗಾರಿಕೆ ರೈತ ಉತ್ಪಾದಕ ಕಂಪನಿ-ಕಡಕೋಳ ವತಿಯಿಂದ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಮಟ್ಟದ ಮಾವು ಅಭಿವೃದ್ಧಿ ತಾಂತ್ರಿಕ ಸಲಹಾ ಸಮಿತಿ ಅಧ್ಯಕ್ಷ ಡಾ. ಎಸ್.ವಿ. ಹಿತ್ತಲಮನಿ, ಮಾತನಾಡಿ, ಮಾವು ಬೇಸಾಯದ ಕುರಿತು ವೈಜ್ಞಾನಿಕ ತಂತ್ರಜ್ಞಾನದ ಸಲಹೆಗಳು, ಮಾವಿನ ತೋಟಗಳ ನಿರ್ವಹಣೆ ಹಾಗೂ ಮಾವಿನ ಗಿಡಗಳ ಸವರುವಿಕೆಯ ಕುರಿತು ಮಾಹಿತಿ ನೀಡಿದರು.

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ, ರೈತ ದೇವರಡ್ಡಿ ಅಗಸನಕೊಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಮ್.ಐ. ನದಾಫ್, ಜಗದೀಶ ಗೌಡರ, ತಿಪ್ಪಣ್ಣ ಕೆಳಗಡೆ, ಈರಯ್ಯ ಪಾಟೀಲ ಹಾಜರಿದ್ದರು. ಸಹಾಯಕ ತೋಟಗಾರಿಕೆ ಅಧಿಕಾರಿ ಶಿವಾನಂದ ಬಾನಿ ಸ್ವಾಗತಿಸಿದರು. ಸಹಾಯಕ ತೋಟಗಾರಿಕೆ ಅಧಿಕಾರಿ ಲಕ್ಷ್ಮೀ ಗಾಣಿಗೇರ ನಿರೂಪಿಸಿದರು. ಈರಯ್ಯ ಪಾಟೀಲ ವಂದಿಸಿದರು.

ಲಕ್ಷ್ಮೇಶ್ವರ ಪಟ್ಟಣದಲ್ಲಿ ಹುಣ್ಣಿಮೆ ಹಬ್ಬಕ್ಕೆ ಮಾವಿನ ಹಣ್ಣಿನ ಖರೀದಿ ಜೋರಾಗಿ ನಡೆಯಿತು.

ಕರಿ ಹರಿದ ಬಿಳಿ ಎತ್ತು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಂಗಾರಿನ ಮೊದಲ ಹಬ್ಬ ಕಾರ ಹುಣ್ಣಿಮೆ ಬಂತೆಂದರೆ, ರೈತರಿಗೆ ಎಲ್ಲಿಲ್ಲದ ಸಂಭ್ರಮಾಚರಣೆ. ಗುರುವಾರ ಸಂಜೆ ರೈತರು ತಮ್ಮ ತಮ್ಮ ಎತ್ತುಗಳನ್ನು ಪೂಜಿಸುವ ಮೂಲಕ ಹೊನ್ನುಗ್ಗಿ ಆಚರಣೆ ಮಾಡಿ ಕಾರ ಹುಣ್ಣಿಮೆ ದಿನದಂದು ಸಾಯಂಕಾಲ ಕರಿ ಹರಿಯುವ ಮೂಲಕ ಕಾರಹುಣ್ಣಿಮೆಯನ್ನು ಸಂಭ್ರಮ ಸಡಗರದಿಂದ ಆಚರಣೆ ಮಾಡಿದರು.

ಮುಳಗುಂದ ಪಟ್ಟಣದ ಅಗಸಿ ಬಾಗಿಲುಗಳಿಗೆ ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ರೈತರು ಕರಿ ಹರಿಯುವ ಎತ್ತುಗಳನ್ನು ಅಲಂಕರಿಸಿ, ಎತ್ತುಗಳ ಕರಿ ಹರಿಯುವ ಸ್ಥಳಕ್ಕೆ ಒಂದೊಂದಾಗಿ ಆಗಮಿಸುತ್ತಿದ್ದಂತೆ ರೈತರ ಹರ್ಷೋದ್ಗಾರ ಮುಗಿಲು ಮುಟ್ಟಿತ್ತು. ಎತ್ತುಗಳ ಕರಿ ಹರಿಯುವ ಸಮಯದಲ್ಲಿ ಅಗಸಿಯಲ್ಲಿ ಬೇವಿನ ಕೊಂಬೆ ಹಾಗೂ ಕೊಬ್ಬರಿ ಬಟ್ಟಲು ಹುರಿ ಹಿಡಿಯಲಾಗಿತ್ತು. ಈಆಧಾರದಲ್ಲಿ ಪ್ರಸ್ತುತ ವರ್ಷದ ಫಸಲು ಲೆಕ್ಕಾಚಾರ ನಡೆಯಿತು.

ಈ ಬಾರಿ ಸಂಗಪ್ಪ ಬಶೆಟ್ಟೆಪ್ಪ ಸುಂಕಾಪೂರ ಅವರ ಬಿಳಿ ಎತ್ತು ಕರಿ ಹರಿಯಿತು. ಬಿಳಿ ಎತ್ತು ಕರಿ ಹರಿದಿರುವುದರಿಂದ ಈ ವರ್ಷ ಮುಂಗಾರು, ಹಿಂಗಾರು ಮಳೆ ಬೆಳೆ ಸಮೃದ್ಧಿಯಾಗಿ ಬೆಳೆ ಬರುವುದು ಎಂಬುದು ರೈತರ ಅಭಿಪ್ರಾಯವಾಗಿತ್ತು.

ಸಂಸ್ಕೃತ ಸಂಭಾಷಣಾ ಶಿಬಿರ ಯಶಸ್ವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪತಂಜಲಿ ಯೋಗ ಮಂದಿರದಲ್ಲಿ ಜರುಗಿದ ಸಂಸ್ಕೃತ ಸಂಭಾಷಣಾ ಶಿಬಿರದಲ್ಲಿ 20ಕ್ಕೂ ಹೆಚ್ಚು ಕಲಿಕಾಸಕ್ತರು ಶಿಬಿರದ ಪ್ರಯೋಜನ ಪಡೆದುಕೊಂಡರು. ಶಿಬಿರದ ಮುಖ್ಯ ಅತಿಥಿಗಳಾದ ವಿಜಯ ಕಲಾಮಂದಿರ ಕಾಲೇಜಿನ ಉಪಾಧ್ಯಕ್ಷ ಸಂತೋಷ ಅಕ್ಕಿ, ಸಂಸ್ಕೃತ ಭಾರತೀ ರಾಜ್ಯ ಸಂಘಟಕ ಲಕ್ಷ್ಮೀನಾರಾಯಣ ಜಿ ಶಿಬಿರದ ಕುರಿತು ಮಾತನಾಡಿದರು.

ಶಿಬಿರದಲ್ಲಿ ಸಂಸ್ಕೃತ ಶಿಕ್ಷಕರಾದ ಗಣಪತಿ ಗಾವಂಕರ, ಸಂಸ್ಕೃತ ಭಾರತೀ ಜಿಲ್ಲಾ ಸಂಯೋಜಕ ಶಿವಮೂರ್ತೆಪ್ಪ ಸಿಂಪಗೇರ, ಶಿಬಿರದ ಶಿಕ್ಷಕ ಕಿರಣಕುಮಾರ ಅರಳಿಕಟ್ಟಿ ಮತ್ತು ಸಂಸ್ಕೃತ ಭಾರತೀ ಪ್ರಮುಖರಾದ ಗಣೇಶ ಸವಣೂರು, ಶಿಬಿರ ಸಂಯೋಜಕ ಮೌನೇಶ್ ಭಜಂತ್ರಿ ಶಿಬಿರದಲ್ಲಿ ಪಾಲ್ಗೊಂಡ ಗಣ್ಯಮಾನ್ಯರು ಹಾಗೂ ಕಲಿಕಾಸಕ್ತರಿಗೆ ಧನ್ಯವಾದಗಳು ತಿಳಿಸಿದರು.

ಹತ್ತು ದಿನಗಳ ಕಾಲ ಸಂಸ್ಕೃತವನ್ನು ಕಲಿತ ಬಸವಣ್ಣೆಪ್ಪ ಹರ್ತಿ, ವಸಂತ ಹಲಿಗಿ, ಜಯಶ್ರೀ, ಮಾಲಾ ಭಗಿನಿ, ಶಶಿರೇಖಾ, ರೇಖಾ, ಸಾಗರ ಭಜಂತ್ರಿ, ಗಂಗಾಧರಯ್ಯ, ರೇಣುಕಾ, ಮಂಜು ದೇಸಾಯಿ, ಕಸ್ತೂರಿ, ಕಬಾಡಿ, ವಿಹಾನ ಕೊಪ್ಪರ ಮುಂತಾದವರು ಶಿಬಿರದ ಬಗ್ಗೆ ತಮ್ಮ ಅನುಭವವನ್ನು ತಿಳಿಸಿದರು.

ಎಸ್‌ಡಿಪಿಐ ಸಂಸ್ಥಾಪನಾ ದಿನ: ಧ್ವಜಾರೋಹಣ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾದ ಸಂಸ್ಥಾಪನಾ ದಿನದ ಅಂಗವಾಗಿ ಶಿರಹಟ್ಟಿ ತಾಲೂಕಿನ ವಿಧಾನಸಭಾ ಕ್ಷೇತ್ರ ಸಮಿತಿ ವತಿಯಿಂದ ಶಿರಹಟ್ಟಿ ನಗರದಲ್ಲಿ ಪಕ್ಷದ ಕಚೇರಿ ಉದ್ಘಾಟನೆ ಹಾಗೂ ಪಕ್ಷದ ಧ್ವಜಾರೋಹಣ ಕಾರ್ಯಕ್ರಮವನ್ನು ಶಿರಹಟ್ಟಿ ವಿಧಾನಸಭಾ ಕ್ಷೇತ್ರ ಸಮಿತಿ ಅಧ್ಯಕ್ಷ ಅಬ್ದುಲ್ ಕಾಗದಗಾರ ಹಾಗೂ ರಾಜ್ಯ ಸಮಿತಿ ಸದಸ್ಯರು ಜಿಲ್ಲಾ ಉಸ್ತುವಾರಿಗಳಾದ ರಮಜಾನ ಕಡಿವಾಲ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು. ಮುಖ್ಯ ಅತಿಥಿಗಳಾಗಿ ಖ್ಯಾತ ವಕೀಲ ಎ.ಎ. ಬೇವಿನಗಿಡದ, ಹಾಜಿ ರಿಯಾಜ್ ಢಾಲಾಯತ, ಹಾಜಿ ನಜೀರ್‌ಸಾಬ್ ಬುವಾಜಿ, ಗೌಸ್ ಪೀರ್ ಮಕಾನದಾರ, ದಾವಲ್‌ಸಾಬ್ ಢಾಲಯತ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಶಿರಹಟ್ಟಿ ವಿಧಾನಸಭಾ ಕ್ಷೇತ್ರ ಸಮಿತಿ ಉಪಾಧ್ಯಕ್ಷ ಮುಜಾಮ್ಮಿಲ್ ಮಕಾನದಾರ, ಪ್ರಧಾನ ಕಾರ್ಯದರ್ಶಿ ದಾದಾಪೀರ್ ಢಾಲಾಯತ, ಕಾರ್ಯದರ್ಶಿ ಹಜರತ್ ಅಲಿ ತಹಸೀಲ್ದಾರ್, ಖಜಾಂಚಿ ಇಜಾಜ್ ಅಹ್ಮದ್ ಮಕಾನದಾರ ಹಾಗೂ ಸಮಿತಿಯ ಸರ್ವ ಸದಸ್ಯರು, ಕಾರ್ಯಕರ್ತರು, ಹಿತೈಷಿಗಳು ಪಾಲ್ಗೊಂಡಿದ್ದರು.

ಏಕಕಾಲದಲ್ಲಿ ಯೋಗ ಪ್ರದರ್ಶನ ನೀಡಿದ ಸಾವಿರಾರು ವಿದ್ಯಾರ್ಥಿಗಳು

ಯೋಗದ ಮಹತ್ವವರಿತು ಆಚರಿಸಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಲ್ಲಾ ಹಿರಿಯ ಹಾಗೂ ಪ್ರೌಢಶಾಲೆಗಳ ಆಯ್ದ ವಿದ್ಯಾರ್ಥಿಗಳ ಬೃಹತ್ ಯೋಗ ಪ್ರದರ್ಶನವನ್ನು ತಾಯಿ ಪಾರ್ವತಿ ಮಕ್ಕಳ ಬಳಗ, ತಾಲೂಕ ಆಡಳಿತ, ಶಿಕ್ಷಣ ಇಲಾಖೆ, ಯೋಗ ಸಾಧಕರ ಸಮಿತಿ, ಆಯುಷ್ ಇಲಾಖೆ ಇವರ ಸಹಯೋಗದಲ್ಲಿ ಶುಕ್ರವಾರ ತಾಯಿ ಪಾರ್ವತಿ ಮಕ್ಕಳ ಬಳಗದ ತೋಂಟದೇವರಮಠದ ಆವರಣದಲ್ಲಿ ಏರ್ಪಡಿಸಲಾಗಿತ್ತು.

ಸಾವಿರಾರು ವಿದ್ಯಾರ್ಥಿಗಳು ಏಕಕಾಲದಲ್ಲಿ ಯೋಗದಲ್ಲಿ ಪಾಲ್ಗೊಳ್ಳುವ ಮೂಲಕ ಯೋಗ ದಿನಾಚರಣೆಯನ್ನು ಆಚರಿಸಿದರು. ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಕೂಡ ಯೋಗ ಮಾಡುವ ಮೂಲಕ ಮಕ್ಕಳಿಗೆ ಮಾದರಿಯಾದರು. ಯೋಗ ಸಾಧಕರು ಹೇಳಿಕೊಡುವ ಎಲ್ಲ ಆಸನಗಳನ್ನು ಸರಳವಾಗಿ ಮಾಡಿದ ಅವರು ಮಕ್ಕಳಿಗೆ ಉತ್ಸಾಹ ತುಂಬಿದರು. ಇವರ ಜೊತೆ ಪಿಎಸ್‌ಐ ಈರಪ್ಪ ರಿತ್ತಿ

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ವಾಸುದೇವ ಸ್ವಾಮಿ, ಯೋಗವು ಪ್ರಾಚೀನ ಕಾಲದಿಂದಲೂ ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯಗಳ ಅವಿಭಾಜ್ಯ ಅಂಗವಾಗಿದೆ. ಅದರ ಪ್ರಾಮುಖ್ಯತೆಯನ್ನು ನಮ್ಮ ಧರ್ಮಗ್ರಂಥಗಳಲ್ಲಿ ಉತ್ತಮವಾಗಿ ದಾಖಲಿಸಲಾಗಿದೆ ಮತ್ತು ಈಗ ವಿಶ್ವಾದ್ಯಂತ ಗುರುತಿಸಲ್ಪಟ್ಟಿದೆ. ಯೋಗವು ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನಗೊಳಿಸುವ ಸಮಗ್ರ ಅಭ್ಯಾಸವಾಗಿದೆ ಎಂದು ಹೇಳಿದರು.

ಸೇರಿದಂತೆ ಅನೇಕ ಇಲಾಖೆಯ ಅಧಿಕಾರಿಗಳು ಯೋಗ ಶಿಬಿರದಲ್ಲಿ ಪಾಲ್ಗೊಂಡಿದ್ದರು.

ಪಿಎಸ್‌ಐ ಈರಪ್ಪ ರಿತ್ತಿ ಮಾತನಾಡಿ, ಜಗತ್ತಿಗೆ ಭಾರತವು ನೀಡಿದ ಶ್ರೇಷ್ಠ ಕೊಡುಗೆಗಳಲ್ಲಿ ಯೋಗವು ಕೂಡ ಒಂದು. ಇಂದು ಜಗತ್ತಿನ ಎಲ್ಲ ರಾಷ್ಟ್ರಗಳಲ್ಲಿ ಯೋಗವನ್ನು ಆರೋಗ್ಯ ಜೀವನದ ಅವಿಭಾಜ್ಯ ಭಾಗವಾಗಿ ನೋಡಲಾಗುತ್ತಿದೆ. ಯೋಗದ ತವರು ನೆಲವಾಗಿರುವ ಭಾರತದಲ್ಲಿ ಯೋಗದ ಮಹತ್ವವನ್ನು ನಾವೆಲ್ಲ ಅರಿತು ಆಚರಿಸಬೇಕಾಗಿದೆ. ಮಾನಸಿಕ ಒತ್ತಡ ಮತ್ತು ಉತ್ತಮ ಆರೋಗ್ಯಕ್ಕೆ ಯೋಗದ ಮೊರೆ ಹೋಗುತ್ತಿದ್ದಾರೆ. ವಿಶ್ವ ಯೋಗ ದಿನಾಚರಣೆಯಂದು ಮಾತ್ರ ನಾವು ಯೋಗಕ್ಕಾಗಿ ಮೀಸಲಿಡದೆ ನಿತ್ಯ ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವದರ ಮೂಲಕ ಉತ್ತಮ ಆರೋಗ್ಯ ಪಡೆಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ಸುವರ್ಣಬಾಯಿ ಬಹದ್ದೂರದೇಸಾಯಿ ವಹಿಸಿದ್ದರು. ಈಶ್ವರೀಯ ವಿಶ್ವವಿದ್ಯಾಲಯದ ಬಿ.ಕೆ. ನಾಗಲಾಂಬಿಕೆ, ಶಾರಕ್ಕ ಮಹಾಂತಶೆಟ್ಟರ, ಜಯಲಕ್ಷ್ಮೀ ಮಹಾಂತಶೆಟ್ಟರ, ಪ್ರೌಢಶಾಲೆಯ ಬಿಆರ್‌ಪಿ ಈಶ್ವರ ಮೆಡ್ಲೇರಿ, ಬಸವರಾಜ ಯರಗುಪ್ಪಿ, ಸಿಆರ್‌ಪಿಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಯೋಗ ಸಾಧಕರ ಸಮಿತಿಯ ದಶರಥ ಕೋಟೆಗೌಡ್ರ, ಬಸವರಾಜ ಸಂಗಪ್ಪಶೆಟ್ಟರ, ಪ್ರಭಾವತಿ ಪುರಾಣಿಕಮಠ, ಪ್ರಕಾಶ ಹುಲಬಜಾರ, ನೀಲಪ್ಪ ತೆಗ್ಗಳ್ಳಿ, ಚಂದ್ರಶೇಖರ ಪಾಟೀಲ, ಪ್ರವೀಣ ಬೆನಹಾಳ, ಪಾರ್ವತಿ ಕಳ್ಳಿಮಠ, ವಿದ್ಯಾ ಗಾಂಜಿ, ಜ್ಯೋತಿ ಸುಣಗಾರ, ಶೈಲಾ ಆದಿ, ಶಕುಂತಲಾ ಜಗಳಿ, ಸೇರಿದಂತೆ ಯೋಗ ಶಿಕ್ಷಕರು, ಯೋಗ ಸಾಧಕರು ಸೇರಿದಂತೆ ಸಾವಿರಾರು ವಿದ್ಯಾರ್ಥಿಗಳು ಹಾಜರಿದ್ದರು.

ಕಾಲಕಾಲೇಶ್ವರ ಗುಡ್ಡದ ಮಡಿಲಲ್ಲಿ ಬೃಹತ್ ಯೋಗಾಭಿಯಾನ

ಸಕಾರಾತ್ಮಕ ಆಲೋಚನೆಗೆ ಯೋಗ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದಕ್ಷಿಣಕಾಶಿ ಶ್ರೀ ಕಾಲಕಾಲೇಶ್ವರ ದೇವಸ್ಥಾನದ ಗುಡ್ಡದ ಹಚ್ಚಹಸಿರಿನ ಮಡಿಲಲ್ಲಿ ಗಜೇಂದ್ರಗಡದ ಶ್ರೀ ಅನ್ನದಾನೇಶ್ವರ ಪಿಯು ಕಾಲೇಜು, ಅಥರ್ವ ನವೋದಯ ಕೋಚಿಂಗ್ ಸೆಂಟರ್ ಹಾಗೂ ವಿವಿಧ ಸಂಸ್ಥೆಗಳ ಆಶ್ರಯದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನೆಲೆಯಲ್ಲಿ ಸಾವಿರಾರು ವಿದ್ಯಾರ್ಥಿಗಳು ಯೋಗಾಸನ ಪ್ರದರ್ಶನ ಮಾಡಿದರು.

ಜಕ್ಕಲಿ ಗ್ರಾಮದ ಎಂ.ಸಿ.ಎಸ್. ಶಾಲೆಯ ಸಹಶಿಕ್ಷಕ ಹಾಗೂ ಯೋಗಪಟು ವಿ.ಎ. ಕುಂಬಾರ ಮಾತನಾಡಿ, ಸಕಾರಾತ್ಮಕ ಆಲೋಚನೆ, ಸರಿಯಾದ ಆಹಾರ ಕ್ರಮ ಮತ್ತು ಯೋಗದ ಜೀವನ ಶೈಲಿ ರೂಢಿಸಿಕೊಂಡರೆ ಸಧೃಡ ಮನಸ್ಸು ಮತ್ತು ಆರೋಗ್ಯಕರ ದೇಹ ಹೊಂದಲು ಸಾಧ್ಯ ಎಂದರು.

ಹಿರಿಯರಾದ ಶಶಿಧರ್ ಹೂಗಾರ ಮತ್ತು ಸಮಾಜ ಸೇವಕ ರವಿ ಗಡೇದ ಮಾತನಾಡಿ, ಯೋಗ ಎನ್ನುವುದು ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗದೆ ನಿತ್ಯದ ದಿನಚರಿಯನ್ನು ಯೋಗ, ಧ್ಯಾನದಿಂದ ಆರಂಭಿಸುವುದರಿಂದ ಆರೋಗ್ಯ ಹಾಗೂ ಮನಸ್ಸು ಹತೋಟಿಯಲ್ಲಿ ಇರುತ್ತದೆ ಎಂದರು.

ಪಿಯು ಪ್ರಾಚಾರ್ಯ ವಸಂತರಾವ್ ಗಾರಗಿ ಮಾತನಾಡಿ, ಇಂದಿನ ಧಾವಂತದ, ಒತ್ತಡದ ಕಾಲದಲ್ಲಿ ಮನುಷ್ಯನ ಮನಸ್ಸು ವಿಕಾರ ಆಗುತ್ತಿದೆ, ಖಿನ್ನತೆಗೆ ಒಳಗಾಗುತ್ತಿದೆ. ಸಮಾಜ ಘಾತುಕ ಶಕ್ತಿಗಳು ಕೂಡ ಹೆಚ್ಚುತ್ತಿವೆ. ಇಂತಹ ಹೊತ್ತಲ್ಲಿ ದೇಹ, ಮನಸ್ಸನ್ನು ಅರಿಯಲು ಯೋಗದಿಂದ ಮಾತ್ರ ಸಾಧ್ಯ ಎಂದರು

ಇದೇ ವೇಳೆ ಶ್ರೀ ಕಾಲಕಾಲೇಶ್ವರ ದೇವಸ್ಥಾನ ಧರ್ಮದರ್ಶಿಗಳಾದ ಮಂಗಳಾದೇವಿ ದೇಶಮುಖ್, ಗುಡಗೇರಿಯ ಸೇವಾ ನಿವೃತ್ತ ಸೈನಿಕ ಶೇಖಪ್ಪ ಎಂ, ಸಮಾಜ ಸೇವಕ ರವಿ ಗಡೇದ, ಅಥರ್ವ ಶಿಕ್ಷಣ ಸಂಸ್ಥೆಯ ಮಂಜುನಾಥ ರಾಠೋಡ, ಪಿಯು ಪ್ರಾಚಾರ್ಯ ವಸಂತ ಗಾರಗಿ, ಯೋಗ ಪಟು ವಿ.ಎ. ಕುಂಬಾರ ಅವರಿಗೆ ಸಂಸ್ಥೆಗಳ ವತಿಯಿಂದ ಸನ್ಮಾನಿಸಲಾಯಿತು.

ಈ ವೇಳೆ ಅರ್ಚಕ ಮಲ್ಲಯ್ಯ ಪೂಜಾರ, ಮೃತ್ಯುಂಜಯ ಹಿರೇಮಠ, ಪರಶುರಾಮ ಚಿಲಝರಿ, ಬಸವರಾಜ ಹುಚ್ಚಯ್ಯನಮಠ, ಡಿ.ಜಿ. ತಾಳಿಕೋಟಿ, ವೀರೇಶ ರಾಠೋಡ, ಆನಂದ ಭಾಂಡಗೆ, ಮಲ್ಲಯ್ಯ ಭಿಕ್ಷಾವತಿಮಠ, ಬಸಣ್ಣ ಹೊಗರಿ, ಗೋಪಾಲ ರಾಯಬಾಗಿ, ರ

ಜಿಲ್ಲಾ ಮಟ್ಟದ ಚೆಸ್ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲಾ ಮಟ್ಟದ ಚೆಸ್ ಅಸೋಶಿಯೇಶನ್‌ನಿಂದ ಜುಲೈ 7ರಂದು ಲಕ್ಷ್ಮೇಶ್ವರದಲ್ಲಿ ಗದಗ ಜಿಲ್ಲಾ ಮಟ್ಟದ ಚೆಸ್ ಚಾಂಪಿಯನ್‌ಶಿಪ್ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಅಸೋಷಿಯೇಶನ್ ಅಧ್ಯಕ್ಷ ಗಿರೀಶ ಎಂ.ಅಗಡಿ ತಿಳಿಸಿದರು.

ಈ ಕುರಿತು ನಡೆದ ಸಬೆಯಲ್ಲಿ ಮಾಹಿತಿ ನೀಡಿದ ಅವರು, ಈ ಚಾಂಪಿಯನ್‌ಶಿಪ್‌ನ್ನು ವಿಭಾಗವಾರು 12-14-16 ವರ್ಷದೊಳಗಿನ ಮಕ್ಕಳಿಗೆ ಏರ್ಪಡಿಸಲಾಗಿದೆ. ಬಾಲಕ ಮತ್ತು ಬಾಲಕಿರಿಗಾಗಿ ಪ್ರತ್ಯೇಕ ಪ್ರಶಸ್ತಿಯನ್ನು ನೀಡಲಾಗುವುದು. ಶ್ರೇಷ್ಠ ಆಟ ಆಡಿದವರನ್ನು ರಾಜ್ಯಮಟ್ಟದ ಚಾಂಪಿಯನ್‌ಶಿಪ್‌ಗೆ ಆಯ್ಕೆ ಮಾಡಲಾಗುವುದು. ಈ ಪಂದ್ಯಾವಳಿಯ ಲಾಭವನ್ನು ಗದಗ ಜಿಲ್ಲೆಯ ಎಲ್ಲ ಚೆಸ್ ಆಟಗಾರರು ಪಡೆದುಕೊಳ್ಳಬೇಕು. ಪ್ರವೇಶ ಫೀ 200 ರೂ ಇರುತ್ತದೆ. ಆಧಾರ್ ಕಾರ್ಡ್ ಕಡ್ಡಾಯವಾಗಿ ತರಬೇಕು. ಕ್ರೀಡಾಪಟುಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆಯಿದೆ. ಹೆಚ್ಚಿನ ಮಾಹಿತಿಗಾಗಿ ಎಂ.ಆಯ್. ಕಣಕೆ -9945859815 ಇವರನ್ನು ಸಂಪರ್ಕಿಸಬೇಕು ಎಂದರು.

ಈ ವೇಳೆ ಸಂಸ್ಥೆಯ ಗೌರವಾಧ್ಯಕ್ಷ ರಾಮರಾವ್ ವೆರ್ಣೇಕರ್, ಎಸ್.ಎಮ್. ಉಮ್ಮಣ್ಣವರ, ಶ್ರೀಕಾಂತ ಪೂಜಾರ, ಮಂಜುನಾಥ ಅಂಗಡಿ, ಆರ್.ಏ. ಮುಲ್ಲಾ, ಎ.ಜಿ. ಬೂದಿಹಾಳ, ಆದೇಶ ಹುಲಗೂರ, ಚಂದ್ರಶೇಖರ್ ದೊಡ್ಮನಿ, ಶಿವಯ್ಯ ಕುಲಕರ್ಣಿ ಉಪಸ್ಥಿತರಿದ್ದರು.

ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿಕೆ

ಬಿಜೆಪಿಯಿಂದ ಕಾಂಗ್ರೆಸ್ ವಿರುದ್ಧ ಷಡ್ಯಂತ್ರ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಜನರ ಕಲ್ಯಾಣಕ್ಕಾಗಿ ಗ್ಯಾರಂಟಿ ಯೋಜನೆ ಜಾರಿಗೊಳಿಸಿದ್ದು, ಅವುಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಉದ್ದೇಶಕ್ಕಾಗಿ ನಾವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿಲ್ಲ. ಗ್ಯಾರಂಟಿ ಕೊಟ್ಟಿದ್ದು ಚುನಾವಣೆಗೆ ಮಾತ್ರ ಅಲ್ಲ. ಗ್ಯಾರಂಟಿ ನಿಲ್ಲಿಸಬೇಕು ಎನ್ನುವ ಹುನ್ನಾರ ಬಿಜೆಪಿ ನಡೆಸಿದೆ ಎಂದರು.

ರಾಜ್ಯದಲ್ಲಿ ಬಿಜೆಪಿ ಜನರ ದಿಕ್ಕು ತಪ್ಪಿಸುವ ಮೂಲಕ ರಾಜ್ಯ ಸರಕಾರ ಜನ ವಿರೋಧಿ ಸರಕಾರ ಎಂದು ಬಿಂಬಿಸಲು ಹೋರಟಿದ್ದಾರೆ. ಬಿಜೆಪಿ ಸರಕಾರದ ಅವಧಿಯಲ್ಲಿ ತೈಲ ಬೆಲೆ ಏರಿಕೆ ಆದಾಗ ಪ್ರಶ್ನಿಸದ ಅವರು ಈಗ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮುಂದಿಟ್ಟುಕೊಂಡು ರಾಜ್ಯ ಸರಕಾರದ ವಿರುದ್ಧ ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಶೇ.45.5ರಷ್ಟು ಮತಗಳು ಬಂದಿವೆ. ಕನಿಷ್ಠ 13-14 ಸ್ಥಾನಗಳಲ್ಲಿ ಗೆಲ್ಲುವ ವಿಶ್ವಾಸವಿತ್ತು. ಆದರೆ 9 ಸ್ಥಾನಗಳಲ್ಲಿ ಗೆಲುವು ಸಾಧ್ಯವಾಗಿದೆ. 3-4 ಸ್ಥಾನಗಳಲ್ಲಿ ಕಡಿಮೆ ಅಂತರದಲ್ಲಿ ಸೋಲಾಗಿದೆ. ಸೋಲಿಗೆ ಕಾರಣ ಏನು ಎಂಬುದರ ಕುರಿತು ಕೆಪಿಸಿಸಿ ವತಿಯಿಂದ 28 ಕ್ಷೇತ್ರಗಳ ಕುರಿತು ಪರಾಮರ್ಶೆ ಮಾಡಲಾಗುವುದು. ಕಳೆದ ಲೋಸಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಶೇ.37ರಷ್ಟು ಮತ ಬಂದಿತ್ತು. ಆದರೆ ಬಾರಿ ಶೇ.45.5ರಷ್ಟು ಮತ

ನೀಡಿದ್ದು, ಎಲ್ಲ ಮತಬಾಂಧವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆಗೆ ಹೆಚ್ಚು ಒತ್ತು ನೀಡಿ ಬೂತ್ ಮಟ್ಟದಲ್ಲಿ ಪಕ್ಷ ಸಂಘಟಿಸಿ ಮುಂಬರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ, ತಾ.ಪಂ, ಜಿ.ಪಂ ಚುನಾವಣೆಗೆ ಸಿದ್ಧತೆ ಕೈಗೊಳ್ಳಲಾಗುತ್ತಿದೆ ಎಂದರು.

ಚನ್ನಪಟ್ಟಣ, ಬಳ್ಳಾರಿ ಹಾಗೂ ಶಿಗ್ಗಾವಿ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಸಂಬಂಧಪಟ್ಟಂತರ ಪಕ್ಷದ ಸಂಘಟನೆ, ಬೂತ್ ಕಮಿಟಿ ಕುರಿತು ಚರ್ಚೆ ನಡೆಯುತ್ತಿದೆ. ಚುನಾವಣೆಯಲ್ಲಿ ಅಭ್ಯರ್ಥಿ ಯಾರಾಗಬೇಕು ಎಂಬುದನ್ನು ಪಕ್ಷದ ವರಿಷ್ಠರು ತೀರ್ಮಾನ ಮಾಡುತ್ತಾರೆ. ಉಪಚುನಾವಣೆಯ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲುವ ವಿಶ್ವಾಸವಿದೆ ಎಂದರು. ದೇಶ ವಿರೋಧಿ ಹೇಳಿಕೆಗಳು ಹಾಗೂ ಘೋಷಣೆಗಳನ್ನು ಕೂಗುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಆ ರೀತಿ ಯಾರೂ ಹೇಳಿಕೆಗಳನ್ನು, ಘೋಷಣೆಯನ್ನು ಕೂಗಬಾರದು. ದರ್ಶನ ಹಿರೋ ಇರಲಿ, ಜೀರೋ ಇರಲಿ ಸರಕಾರ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಿದೆ. ಸರಕಾರ ಪೊಲೀಸ್ ಇಲಾಖೆಗೆ ಸಂಪೂರ್ಣ ಸ್ವಾತಂತ್ರ ನೀಡಿದ್ದು, ತನಿಖೆ ಆಧರಿಸಿ ಶಿಕ್ಷೆ ಆಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಮುಖಂಡರಾದ ಕೆ.ಎಂ. ಸಯ್ಯದ, ಹುಮಾಯುನ್ ಮಾಗಡಿ, ಸಯ್ಯದ್ ಖಾಲೀದ್ ಕೊಪ್ಪಳ ಇದ್ದರು.

ಎನ್‌ಡಿಎ ಸರಕಾರಕ್ಕೆ ಆಯುಷ್ಯ ಇಲ್ಲ

ಲೋಕಸಭಾ ಚುನಾವಣೆಯಲ್ಲಿ ದೇಶದ ಜನರು ದುರಹಂಕಾರಿ ಸರಕಾರಕ್ಕೆ ಸಂದೇಶ ನೀಡುವ ಮೂಲಕ ಪ್ರಧಾನಿ ನರೇಂದ್ರ ಮೋದಿಗೆ ತಕ್ಕಪಾಠ ಕಲಿಸಿದ್ದಾರೆ. ಎನ್‌ಡಿಎ ಸರ್ಕಾರಕ್ಕೆ ಆಯುಷ್ಯ ಬಹಳ ಕಡಿಮೆ ಇದ್ದು, ಹೆಚ್ಚು ದಿನ ಉಳಿಯದು. ಪ್ರಧಾನಿ ಮೋದಿ ಸಬ್ ಕಾ ವಿಶ್ವಾಸ್ ಕಳೆದುಕೊಂಡಿದ್ದಾರೆ. ಆಬ್ ಕಿ ಬಾರ್ ಚಾರಸೋ ಪಾರ್ ಅಂತ ಹೇಳುತ್ತಿದ್ದರೂ, ಆದರೆ ಅವರು 250 ಸ್ಥಾನ ಗೆಲ್ಲಲು ಸಾಧ್ಯವಾಗಿಲ್ಲ. ಮೋದಿ ಅವರು ಜನರ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ. ಸಂವಿಧಾನ ಬದಲಾವಣೆ ಮಾಡಲು ಹುನ್ನಾರ ಮಾಡಿದ್ದ ಅವರಿಗೆ ಜನರು ತಕ್ಕಪಾಠ ಕಲಿಸುವ ಮೂಲಕ ಸಂದೇಶ ನೀಡಿದ್ದಾರೆ ಎಂದರು.

ಸಿದ್ಧಾಂತ ಶಿಖಾಮಣಿ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಮನಸ್ಸನ್ನು ತಣ್ಣಗಿಡುವ ಮಾರ್ಗವೇ ಆಧ್ಯಾತ್ಮ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮನುಷ್ಯ ಜೀವನ ಶ್ರೇಷ್ಠವಾದುದು. ಅರಿತು ಬಾಳುವುದರಲ್ಲಿ ಸುಖ-ಶಾಂತಿಯಿದೆ. ಚಂಚಲ ಮನಸ್ಸನ್ನು ತಣ್ಣಗಿಡುವ ಜೀವನ ಮಾರ್ಗವೇ ಆಧ್ಯಾತ್ಮ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಅಂಗವಾಗಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಸಿದ್ಧಾಂತ ಶಿಖಾಮಣಿ ಗ್ರಂಥ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕು ಬಲಗೊಳ್ಳಲು ಆಧ್ಯಾತ್ಮದ ಅರಿವು ಸಾಧನೆ ಮತ್ತು ನಿರಂತರ ಪ್ರಯತ್ನ ಬೇಕು. ಧರ್ಮ ಆಚರಣೆ ಬೇರೆ ಬೇರೆಯಾದರೂ ಅವುಗಳ ಗುರಿ ಒಂದೇಯಾಗಿದೆ. ಸತ್ಯದ ಸತ್ಪಥದಲ್ಲಿ ಜೀವನ ವಿಕಾಸಗೊಳ್ಳಬೇಕು. ಯಾವ ಸಂಪತ್ತಿಗಾಗಿ ಜೀವ ಜಗತ್ತು ಬದುಕುತ್ತಿದೆಯೋ ಆ ಸಂಪತ್ತಿನ ಪ್ರಾಪ್ತಿಗಾಗಿ ಶ್ರಮಿಸಬೇಕಾಗುತ್ತದೆ. ಮಲಿನಗೊಂಡ ಮನಸ್ಸಿಗೆ ಶಿವಜ್ಞಾನದ ಬೀಜ ಬಿತ್ತಿ ಮಾಧುರ್ಯದ ಫಲಗಳನ್ನು ಪಡೆದುಕೊಳ್ಳು ಪ್ರಯತ್ನಿಸಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ನಿರೂಪಿಸಿದ್ದಾರೆ. ವಿದ್ಯೆ ಚಿಂತನೆ ಆತ್ಮ ವಿಶ್ಲೇಷಣೆ ಮತ್ತು ಸತ್ಯ ಶುದ್ಧ ಧ್ಯೇಯಗಳು ಜೀವನದ ಶ್ರೇಯಸ್ಸಿಗೆ ಮೆಟ್ಟಿಲುಗಳಾಗಿವೆ ಎಂದರು. ಇದೇ ಸಂದರ್ಭದಲ್ಲಿ ಸಿದ್ಧಾಂತ ಶಿಖಾಮಣಿ ಅಪೂರ್ವ ಕೃತಿಯೊಂದನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆಗೊಳಿಸಿದರು. ನಿವೃತ್ತ ಐಪಿಎಸ್ ಅಧಿಕಾರಿ ಮಂಜುನಾಥ ನಾಯ್ಕ, ವೀರಶೈವ ಸಮಾಜದ ಧುರೀಣ ಎನ್. ಜೆ. ರಾಜಶೇಖರ, ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು. ಬಿಳಕಿ ಹಿರೇಮಠದ ರಾಚೋಟೇಶ್ವರ ಶ್ರೀಗಳು, ತಾವರೆಕೆರೆ ಶಿಲಾಮಠದ ಡಾ.ಅಭಿನವ ಸಿದ್ಧಲಿಂಗ ಶ್ರೀಗಳು, ನುಗ್ಗೇಹಳ್ಳಿ ಡಾ.ಮಹೇಶ್ವರ ಶ್ರೀಗಳು ಉಪದೇಶಾಮೃತವನ್ನಿತ್ತರು.

ನಾಡಿನೆಲ್ಲೆಡೆಯಿಂದ 250ಕ್ಕೂ ಹೆಚ್ಚು ಮಹಿಳೆಯರು ಸಿದ್ಧಾಂತ ಶಿಖಾಮಣಿ ಪಾರಾಯಣ ಮಾಡಿ ಇಷ್ಟಲಿಂಗ ಮಹಾಪೂಜೆಯಲ್ಲಿ ಪಾಲ್ಗೊಂಡ ದೃಶ್ಯ ಅಪೂರ್ವವಾಗಿತ್ತು. ಮಳಲಿ ಡಾ.ನಾಗಭೂಷಣ ಶ್ರೀಗಳು ಸ್ವಾಮಿಗಳು ನಿರೂಪಿಸಿದರು.

ಇಂದು ವಿಶ್ವ ಯೋಗ ದಿನವಾಗಿದೆ. ಎಲ್ಲ ಸಂಪತ್ತುಗಳಿಗಿಂತ ಆರೋಗ್ಯ ಸಂಪತ್ತು ದೊಡ್ಡದು. ಮನುಷ್ಯನ ಬದುಕು ಬಹಳಷ್ಟು ಒತ್ತಡದಿಂದ ಕೂಡಿದೆ. ಹಣ ಸಂಪಾದನೆಯೊಂದೇ ಜೀವನದ ಗುರಿಯಲ್ಲ. ಅದರೊಂದಿಗೆ ಒಂದಿಷ್ಟು ಯೋಗ ಧ್ಯಾನ ರೂಢಿಸಿಕೊಂಡರೆ ನೆಮ್ಮದಿ ಜೀವನ ಆರೋಗ್ಯ ದೊರಕಲು ಸಾಧ್ಯವಾಗುತ್ತದೆ. ಕನಿಷ್ಠ ದಿನ ನಿತ್ಯ ಅರ್ಧ ಗಂಟೆಯಾದರೂ ಯೋಗಾಭ್ಯಾಸ ಮಾಡಿಕೊಂಡು ಬರುವುದು ಒಳ್ಳೆಯದೆಂದು ಶ್ರೀಗಳು ಅಭಿಪ್ರಾಯಪಟ್ಟರು.

ಜಿಲ್ಲಾ ಬಿಜೆಪಿ ಯುವ ಮೋರ್ಚಾದಿಂದ ವಿಶ್ವ ಯೋಗ ದಿನಾಚರಣೆ

ಯೋಗ ಮಾಡಿ ಆರೋಗ್ಯವಾಗಿರೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ದೇಶದ ಸಂಪತ್ತು ಯೋಗ. ಋಷಿ ಮುನಿಗಳು ಹಿಂದಿನಕಾಲದಿಂದಲೂ ಯೋಗಾಚರಣೆ ಮಾಡಿ ಪ್ರಕೃತಿಯೊಂದಿಗೆ ಹೇಗೆ ಹೊಂದಿಕೊಳ್ಳಬಹುದು ಎಂಬ ಹಲವು ಉದಾಹರಣೆಗಳು ಇಂದಿಗೂ ಕಾಣಸಿಗುತ್ತವೆ. ಇಂದು ವಿಶ್ವದ 180 ರಾಷ್ಟ್ರಗಳು ಯೋಗದ ಲಾಭ ತಿಳಿದು ತಮ್ಮ ದೈನಂದಿಕ ಜೀವದಲ್ಲಿ ಆಳವಡಿಸಿಕೊಂಡಿದ್ದು ಹೆಮ್ಮೆಯ ಸಂಗತಿ ಎಂದು ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡರ ಹೇಳಿದರು.

ಅವರು ವಿಜಯ ಫೈನ್ ಆರ್ಟ್ಸ್ ಸಂಸ್ಥೆಯ ಆವರಣದಲ್ಲಿ ಜಿಲ್ಲಾ ಬಿಜೆಪಿ ಯುವ ಮೋರ್ಚಾದಿಂದ ಆಯೋಜಿಸಿದ್ದ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಇಂದು ನಗರದ ವಿವಿಧ ಸ್ಥಳಗಳಲ್ಲಿ ಹಾಗೂ ಜಿಲ್ಲೇಯ ಎಲ್ಲಾ ತಾಲೂಕಾ ಮಟ್ಟದಲ್ಲಿಯೂ ಬಿಜೆಪಿ ಯುವ ಮೋರ್ಚಾದಿಂದ ಯೋಗ ದಿನಾಚರಣೆ ಆಚರಿಸಲಾಗಿದ್ದು ವಿಶೇಷವಾಗಿದೆ. ಯೋಗ ಮತ್ತು ಆಯುರ್ವೇದ ಒಂದು ನಾಣ್ಯದ

ಎರಡು ಮುಖವಿದ್ದಂತೆ. ಹಿಂದಿನ ಕಾಲದಲ್ಲಿ ಋಷಿಮುನಿಗಳು ಯೋಗ ಸಾಧನೆಯಿಂದ, ಹಠಯೋಗದಿಂದ ಏನೆಲ್ಲಾ ಸಾಧಿಸಿದ್ದಾರೆ. ಆದ್ದರಿಂದ ನಾವೆಲ್ಲರೂ ಪ್ರತಿ ನಿತ್ಯ ಯೋಗವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಆರೋಗ್ಯದಿಂದ ಇರೋಣ ಎಂದು ಕರೆ ನೀಡಿದರು.

ಸ್ಥಾಯಿ ಸಮಿತಿ ಅಧ್ಯಕ್ಷ, ಜಿಲ್ಲಾ ಬಿಜೆಪಿ ನಗರ ಮಂಡಲದ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿ, ಯೋಗಕ್ಕೆ ಅತಿ ಪ್ರಾಚೀನ ಇತಿಹಾಸ ಇದೆ. ಯೋಗವನ್ನು ನಿತ್ಯ ಅಭ್ಯಾಸ ಮಾಡುವುದರಿಂದ ದೇಹದ ಎಲ್ಲ ಅಂಗಾಂಗಗಳು ಚಟುವಟಿಗಳಿಂದ ಆರೋಗ್ಯವಂತರಾಗಿರಲು ಸಾಧ್ಯ. ಇಂದಿನ ದಿನಾಮಾನಗಳಲ್ಲಿ ಔಷಧೀಗಳಿಂದ ದೂರ ಉಳಿಯಲು ಯೋಗ ಅಭ್ಯಾಸದಿಂದಲೇ ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಪತಂಜಲಿ ಯೋಗ ಶಿಕ್ಷಕರಾದ ಶಂಕರ ಖಾಖಿ, ರಾಹುಲ ಸಂಕಣ್ಣವರ, ಸಾಗರ, ರಾಹುಲ ಅರಳಿ, ಅರುಣ ಹುಲ್ಲುರ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಯೋಗ ನಮ್ಮನ್ನು ಎತಂಹ ಪ್ರತಿಕೂಲ ಪರಿಸ್ಥಿತಿಯಲ್ಲೂ ಮಾನಸಿಕ, ದೈಹಿಕವಾಗಿ ಸದೃಢವಾಗಿಡುವುದಲ್ಲದೇ ರೋಗಗಳಿಂದ ನಮ್ಮನ್ನು ಕಾಪಾಡಬಲ್ಲದು. ಯೋಗ ಮಾಡುವರು ಯಾವಾಗಲು ಯುವಕರಂತೆ ಸದೃಡರಾಗಿರುತ್ತಾರೆ. ಯೋಗ ನಮ್ಮನ್ನು ಆತಂರಿಕವಾಗಿ ಸದೃಢರನ್ನಾಗಿಸುವುದು ಎಂದರು.

ಅಲಗಿಲವಾಡ ಶಾಲೆಯಲ್ಲಿ ಯೋಗ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ ಸೂರ್ಯನಮಸ್ಕಾರ, ಪದ್ಮಾಸನ, ವೃಕ್ಷಾಸನ, ಶವಾಸನ, ತಾಡಾಸನ ಒಳಗೊಂಡಂತೆ ಹಲವಾರು ಯೋಗಾಸನಗಳನ್ನು ಮಾಡಿಸಿ ಅವುಗಳ ಉಪಯುಕ್ತತೆ ಬಗ್ಗೆ ಮಕ್ಕಳಿಗೆ ತಿಳುವಳಿಕೆ ನೀಡಿದರು

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮರಿಯಪ್ಪ ದೊಡ್ಡಮನಿ, ಗ್ರಾ.ಪಂ ಸದಸ್ಯ ಅಲಗಿಲವಾಡ ಗ್ರಾಮದ ಪ್ರೇಮಯ್ಯ ಬಾಳಿಹಳ್ಳಿಮಠ, ಗುರುಮಾತೆ ಜೆ.ಎಚ್. ರಡ್ಡೇರ, ಗ್ರಾಮದ ಹಿರಿಯರಾದ ಗುದ್ಲೆಪ್ಪಗೌಡ ಪಾಟೀಲ, ವೀರಣ್ಣ ಬಡಿಗೇರ, ಮೈನು ಮುಂಡರಗಿ, ಗ್ರಾಮದ ಗುರು-ಹಿರಿಯರು ಪಾಲ್ಗೊಂಡಿದ್ದರು.

ಗದಗ ನಗರದ ಎಸ್.ವ್ಹಿ.ಟಿ. ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ ಝೀ ಕನ್ನಡ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಹಾಗೂ ಕಾಮಿಡಿ ಕಿಲಾಡಿಗಳು ರಿಯಾಲಿಟಿ ಶೋಗಳ ಆಡಿಷನ್ ನಡೆಸಲಾಯಿತು. ಸಹಕಾರ ನೀಡಿದ ರೋಟರಿ ಗದಗ ಸೆಂಟ್ರಲ್‌ನ ಅಧ್ಯಕ್ಷ ವಿಜಯಕುಮಾರ ಹಿರೇಮಠ, ಕಾರ್ಯದರ್ಶಿ ಸಂತೋಷ ತೋಟಗಂಟಿಮಠ, ಎಸ್.ವ್ಹಿ.ಟಿ. ಪ್ಯಾರಾಮೆಡಿಕಲ್ ಕಾಲೇಜಿನ ಚೇರಮನ್ ವನಜಾಕ್ಷಿ ತೋಟಗಂಟಿಮಠ, ಕಲಾವಿದರಿಗೆ, ತಾಂತ್ರಿಕ ತಂಡಕ್ಕೆ ರೋಟರಿ ಕ್ಲಬ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ನಟರಂಗ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಸೋಮಶೇಖರ ಚಿಕ್ಕಮಠ ಉಪಸ್ಥಿತರಿದ್ದರು.

ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ದತ್ತಿ ಉಪನ್ಯಾಸ

ಯಜಮಾನ್ ಗೂಳಪ್ಪನವರದು ಧೀಮಂತ ವ್ಯಕ್ತಿತ್ವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರದ್ಧೆ, ಪ್ರಾಮಾಣಿಕ ಪ್ರಯತ್ನ ಹಾಗೂ ಗುರುವಿನ ಆಶೀರ್ವಾದಿಂದ ಸಾಮಾನ್ಯನೋರ್ವ ಅಸಮಾನ್ಯನಾಗಿ ಬೆಳೆಯಬಲ್ಲ ಎಂಬುದಕ್ಕೆ ಮಾಜಿ ಶಾಸಕರಾಗಿದ್ದ ದಿ.ಯಜಮಾನ್ ಗೂಳಪ್ಪ ಉಪನಾಳ ಶಾಶ್ವತ ನಿದರ್ಶನವಾಗಿ ಉಳಿಯುತ್ತಾರೆ. ಅವರ ಕಾರ್ಯ ಪ್ರೇರಣೆ ಇಂದಿಗೂ ಬಹು ಜನರಿಗೆ ಬದುಕಿನ ದಾರಿದೀಪ ಎನಿಸಿದೆ ಎಂದು ಶ್ರೀ ಸೋಮೇಶ್ವರ ರೈತರ ಸಹಕಾರಿ ನೂಲಿನ ಗಿರಣಿಯ ಚೇರಮನ್ ಪುಲಿಕೇಶಿ ಗೂಳಪ್ಪ ಉಪನಾಳ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಶಾಂತಿಧಾಮ ವೃದ್ಧಾಶ್ರಮದಲ್ಲಿ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ದತ್ತಿ ಉಪನ್ಯಾಸಗಳನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ಯಜಮಾನ ಜಿ.ಎಫ್. ಉಪನಾಳ ಇಂದು ನಮ್ಮ ನಡುವೆ ಇಲ್ಲದಿದ್ದರೂ ಅವರು ಮಾಡಿದ ಕಾರ್ಯ, ಸೇವೆ ಹಾಗೂ